ಸತ್ಯ ಮತ್ತು ಧೈರ್ಯದ ಧ್ವನಿ
# ತುಂಗ ಬಿಂಬ
TUNGA BIMBA | KANNADA DAILY MORNING | ಕನ್ನಡ ದಿನ ಪತ್ರಿಕೆ | RNI No: KARKAN/2023/86923







ಸಂಪುಟ: 04 Vol: | ಸಂಚಿಕೆ: 114 Issue: | ರಾಯಚೂರು Raichur | 16-10-2026 | ಶುಕ್ರವಾರ Friday | ಪುಟ : 04 Page: | ಬೆಲೆ: Price: ₹ 2.00 | Postal Reg No.: RCR/L/RNP/95/2025-27 | tungabimba@gmail.com | ಸಂಪಾದಕರು : ಗುರುರಾಜ ಕೆ Editor: Gururaja K 98863 85685

# ಇಂಡಿ ವಿಲೇಜ್ ಟೆಕ್ ಸಂಸ್ಥೆಯಲ್ಲಿ 24 ಉದ್ಯೋಗಿಗಳ ವಜಾ ವಿವಾದ:

## ನಿಯಮ ಉಲ್ಲಂಘನೆಯೋ, ಆಡಳಿತದ ನಿರ್ಧಾರವೋ? ಸಮಗ್ರ ತನಿಖೆಗೆ ಆಗ್ರಹ

ರಾಯಚೂರು: ನಗರದ ಮಾವಿನ ಕೆರೆ ಸಮೀಪದ ಟ್ಯಾಂಕ್ ಬಂಡ್ ರಸ್ತೆಯಲ್ಲಿರುವ ಇಂಡಿ ವಿಲೇಜ್ ಟೆಕ್ ಸೊಲ್ಯೂಷನ್ಸ್ ಸಂಸ್ಥೆಯಲ್ಲಿ ಏಕಕಾಲಕ್ಕೆ 24 ಉದ್ಯೋಗಿಗಳನ್ನು ಕೆಲಸದಿಂದ ವಜಾಗೊಳಿಸಿರುವ ವಿಚಾರ ವಿವಾದಕ್ಕೆ ಕಾರಣವಾಗಿದೆ. ಉದ್ಯೋಗಿಗಳ ವಜಾ ಪ್ರಕ್ರಿಯೆಯಲ್ಲಿ ಧಾರ್ಮಿಕ ತಾರತಮ್ಯ ನಡೆದಿದೆ ಎಂಬ ಆರೋಪಗಳು ಕೇಳಿಬಂದಿರುವ ಬೆನ್ನಲ್ಲೇ, ಸಂಸ್ಥೆಯ ರಾಯಚೂರು ಘಟಕದ ಜನರಲ್ ಮ್ಯಾನೇಜರ್ ಪ್ರಿಯಾಂಕಾ ಈ ಆರೋಪಗಳನ್ನು ತಳ್ಳಿಹಾಕಿದ್ದಾರೆ. ಸಂಸ್ಥೆಯ ನಿಯಮಗಳನ್ನು ಉಲ್ಲಂಘಿಸಿದ ಕಾರಣಕ್ಕೆ 24 ಉದ್ಯೋಗಿಗಳನ್ನು ವಜಾಗೊಳಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದು, ಪ್ರಕರಣದ ಹಿಂದಿನ ವಾಸ್ತವಾಂಶಗಳನ್ನು ಬಹಿರಂಗಪಡಿಸಬೇಕೆಂಬ ಆಗ್ರಹ ವ್ಯಕ್ತವಾಗಿದೆ.

ಸಂಸ್ಥೆಯಲ್ಲಿ ಹಿಂದೂ ಸಮುದಾಯಕ್ಕೆ ಸೇರಿದ ಉದ್ಯೋಗಿಗಳನ್ನು ಹೆಚ್ಚಿನ ಸಂಖ್ಯೆಯಲ್ಲಿ ಕೆಲಸದಿಂದ ತೆಗೆದುಹಾಕಲಾಗಿದ್ದು, ಮುಸ್ಲಿಂ ಸಮುದಾಯದ ಕೆಲವರನ್ನು ಮಾತ್ರ ವಜಾಗೊಳಿಸಲಾಗಿದೆ ಎಂಬ ಆರೋಪಗಳು ಕೆಲಸ ಕಳೆದುಕೊಂಡಿದ್ದಾರೆ ಎನ್ನಲಾದ ಕೆಲ ಯುವಕ, ಯುವತಿಯರಿಂದ ಕೇಳಿಬಂದಿವೆ. ಆದರೆ ಈ ಆರೋಪಗಳಿಗೆ ಪೂರಕವಾದ ಧರ್ಮವಾರು ಉದ್ಯೋಗಿಗಳ ವಿವರಗಳು, ವಜಾ ಆದೇಶಗಳು ಅಥವಾ ಇತರ ದಾಖಲೆಗಳು ಈವರೆಗೆ ಲಭ್ಯವಾಗಿಲ್ಲ. ಹೀಗಾಗಿ ಧಾರ್ಮಿಕ ತಾರತಮ್ಯ ನಡೆದಿದೆ ಎಂಬ ಆರೋಪ ಸ್ವತಂತ್ರವಾಗಿ ದೃಢಪಟ್ಟಿಲ್ಲ.

ಈ ಕುರಿತು ಮಾಹಿತಿ ನೀಡಿರುವ ರಾಯಚೂರು ಘಟಕದ ಜನರಲ್ ಮ್ಯಾನೇಜರ್ ಪ್ರಿಯಾಂಕಾ, ಸಂಸ್ಥೆಯ ವಿರುದ್ಧ ಕೇಳಿಬರುತ್ತಿರುವ ಧಾರ್ಮಿಕ ತಾರತಮ್ಯದ ಆರೋಪಗಳು ಸಂಪೂರ್ಣ ಸುಳ್ಳು. ಸಂಸ್ಥೆಯಲ್ಲಿ ಯಾವುದೇ ಧರ್ಮ ಅಥವಾ ಸಮುದಾಯದ ಆಧಾರದ ಮೇಲೆ ಉದ್ಯೋಗಿಗಳ ನಡುವೆ ಭೇದಭಾವ ಮಾಡುವುದಿಲ್ಲ. ಸಂಸ್ಥೆಯ ಆಂತರಿಕ ನಿಯಮಗಳನ್ನು ಉಲ್ಲಂಘಿಸಿರುವುದು ಕಂಡುಬಂದ ಹಿನ್ನೆಲೆಯಲ್ಲಿ 24 ಉದ್ಯೋಗಿಗಳನ್ನು ಗುರುತಿಸಿ, ಅವರ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ನಿಯಮ ಉಲ್ಲಂಘನೆಯಲ್ಲಿ ಭಾಗಿಯಾಗಿದ್ದ 24 ಉದ್ಯೋಗಿಗಳ ವಿರುದ್ಧವೂ ಅಗತ್ಯ ಸಾಕ್ಷ್ಯಾಧಾರಗಳು ಸಂಸ್ಥೆಯ ಬಳಿ ಇವೆ. ಈ ಕಾರಣದಿಂದಲೇ ಎಲ್ಲ 24 ಮಂದಿಯನ್ನು ಕೆಲಸದಿಂದ ವಜಾಗೊಳಿಸಲಾಗಿದೆ. ಇದು ಧಾರ್ಮಿಕ ತಾರತಮ್ಯಕ್ಕೆ ಸಂಬಂಧಿಸಿದ




ಕ್ರಮವಲ್ಲ, ಸಂಸ್ಥೆಯ ನಿಯಮಗಳ ಉಲ್ಲಂಘನೆಗೆ ಸಂಬಂಧಿಸಿದ ಶಿಸ್ತುಕ್ರಮವಾಗಿದೆ ಎಂದು ಪ್ರಿಯಾಂಕಾ ಸ್ಪಷ್ಟಪಡಿಸಿದ್ದಾರೆ.

ಸಂಸ್ಥೆಯಲ್ಲಿ ಎಲ್ಲ ಧರ್ಮದ ಉದ್ಯೋಗಿಗಳಿಗೆ ಸಮಾನ ಅವಕಾಶ ನೀಡಲಾಗುತ್ತಿದೆ. ಮಹಿಳಾ ಸಬಲೀಕರಣಕ್ಕೂ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಗ್ರಾಮೀಣ ಪ್ರದೇಶದ ಯುವಕ, ಯುವತಿಯರಿಗೆ ಉದ್ಯೋಗಾವಕಾಶಗಳನ್ನು ಕಲ್ಪಿಸುವ ಮೂಲಕ ಆರ್ಥಿಕ ಸ್ವಾವಲಂಬನೆಗೆ ಪ್ರೋತ್ಸಾಹ ನೀಡಲಾಗುತ್ತಿದೆ. ಇಂತಹ ಸಂಸ್ಥೆಯ ವಿರುದ್ಧ ಕೆಲವರು ಏಕೆ ನಕಾರಾತ್ಮಕ ಮಾಹಿತಿಗಳನ್ನು ಹರಡುತ್ತಿದ್ದಾರೆ ಎಂಬುದು ಅರ್ಥವಾಗುತ್ತಿಲ್ಲ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಆದರೆ, 24 ಉದ್ಯೋಗಿಗಳನ್ನು ವಜಾಗೊಳಿಸುವಷ್ಟು ಗಂಭೀರವಾದ ನಿಯಮ ಉಲ್ಲಂಘನೆ ಯಾವುದು? ಎಲ್ಲ 24 ಮಂದಿ ಒಂದೇ ರೀತಿಯ ನಿಯಮ ಉಲ್ಲಂಘನೆಯಲ್ಲಿ ಭಾಗಿಯಾಗಿದ್ದರೇ ಅಥವಾ ಪ್ರತ್ಯೇಕ ಪ್ರಕರಣಗಳಲ್ಲಿ ತಪ್ಪು ಎಸಗಿದ್ದರೇ? ಈ ಕುರಿತು ಸಂಸ್ಥೆಯು ಆಂತರಿಕ ವಿಚಾರಣೆ ನಡೆಸಿದೆಯೇ? ಸಂಬಂಧಪಟ್ಟ ಉದ್ಯೋಗಿಗಳಿಗೆ ತಮ್ಮ ಮೇಲಿನ ಆರೋಪಗಳಿಗೆ ಉತ್ತರಿಸಲು ಅವಕಾಶ ನೀಡಲಾಗಿತ್ತೇ? ಎಂಬ ಪ್ರಶ್ನೆಗಳಿಗೆ ಇನ್ನೂ ಸ್ಪಷ್ಟ ಉತ್ತರ ದೊರೆತಿಲ್ಲ.

ವಿಶೇಷವಾಗಿ ಸಂಸ್ಥೆಯ ಮುಖ್ಯ ಆಡಳಿತ ಕೇಂದ್ರ ಬೆಂಗಳೂರಿನಲ್ಲಿರುವ ಹಿನ್ನೆಲೆಯಲ್ಲಿ, ರಾಯಚೂರು ಘಟಕದ 24 ಉದ್ಯೋಗಿಗಳ ವಜಾಕ್ಕೆ ಅಂತಿಮ ಅನುಮೋದನೆ ನೀಡಿದವರು ಯಾರು ಎಂಬ ಪ್ರಶ್ನೆಯೂ ಮಹತ್ವ ಪಡೆದುಕೊಂಡಿದೆ. ಉದ್ಯೋಗಿಗಳ ವಜಾ ನಿರ್ಧಾರವನ್ನು ರಾಯಚೂರು ಘಟಕದ ಆಡಳಿತವೇ ಕೈಗೊಂಡಿದೆಯೇ ಅಥವಾ ಬೆಂಗಳೂರಿನ ಕೇಂದ್ರ ಕಚೇರಿಯ ನಿರ್ದೇಶನದ ಮೇರೆಗೆ ಕ್ರಮ ಜರುಗಿಸಲಾಗಿದೆಯೇ ಎಂಬುದನ್ನು ಸಂಸ್ಥೆಯ ಉನ್ನತ ಆಡಳಿತ ಮಂಡಳಿ ಸ್ಪಷ್ಟಪಡಿಸಬೇಕಿದೆ.

ರಾಯಚೂರು ಘಟಕದ ಜನರಲ್ ಮ್ಯಾನೇಜರ್ ಪ್ರಿಯಾಂಕಾ ಅವರು ಎಲ್ಲ 24 ಉದ್ಯೋಗಿಗಳ ವಿರುದ್ಧ ಸಾಕ್ಷ್ಯಾಧಾರಗಳಿವೆ ಎಂದು ಹೇಳಿದ್ದರೂ, ಆ ದಾಖಲೆಗಳ ಸ್ವರೂಪ, ನಿಯಮ ಉಲ್ಲಂಘನೆಯ ವಿವರಗಳು ಹಾಗೂ ವಜಾ ಪ್ರಕ್ರಿಯೆಯ ಕುರಿತು ಸಂಪೂರ್ಣ ಮಾಹಿತಿ ಇನ್ನೂ ಬಹಿರಂಗವಾಗಿಲ್ಲ. ಹೀಗಾಗಿ ಸಂಸ್ಥೆಯ ಹೇಳಿಕೆ ಮತ್ತು ಉದ್ಯೋಗಿಗಳ ಆರೋಪಗಳ ನಡುವಿನ ವಾಸ್ತವಾಂಶಗಳನ್ನು ತಿಳಿದುಕೊಳ್ಳಲು ಸ್ವತಂತ್ರ ಪರಿಶೀಲನೆಯ ಅಗತ್ಯವಿದೆ.

ಗ್ರಾಮೀಣ ಯುವಜನರಿಗೆ ಉದ್ಯೋಗಾವಕಾಶಗಳನ್ನು ಒದಗಿಸುವ ಉದ್ದೇಶದಿಂದ ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಯಲ್ಲಿ ಒಂದೇ ಸಂದರ್ಭದಲ್ಲಿ 24 ಮಂದಿ ಉದ್ಯೋಗ ಕಳೆದುಕೊಂಡಿರುವುದು ಗಂಭೀರ ವಿಚಾರವಾಗಿದೆ. ಕೃತಕ ಬುದ್ಧಿಮತ್ತೆಗೆ ಸಂಬಂಧಿಸಿದ ದತ್ತಾಂಶ ಸಂಸ್ಕರಣೆ, ಡೇಟಾ ಅನೋಟೇಷನ್ ಸೇರಿದಂತೆ ವಿವಿಧ ತಾಂತ್ರಿಕ ಸೇವೆಗಳನ್ನು ಒದಗಿಸುತ್ತಿರುವ ಸಂಸ್ಥೆಯು ಗ್ರಾಮೀಣ ಪ್ರದೇಶದ ಯುವಜನರ ಉದ್ಯೋಗ ಮತ್ತು ಕೌಶಲ್ಯಾಭಿವೃದ್ಧಿಗೆ ಒತ್ತು ನೀಡುತ್ತಿರುವುದಾಗಿ ತನ್ನ ಅಧಿಕೃತ ವೆಬ್‌ಸೈಟ್‌ನಲ್ಲಿ ತಿಳಿಸಿದೆ. ಇಂತಹ ಸಂಸ್ಥೆಯಲ್ಲಿ ನಡೆದಿರುವ ಸಾಮೂಹಿಕ ವಜಾ ಪ್ರಕ್ರಿಯೆಯ ಕುರಿತು ಪಾರದರ್ಶಕತೆ ಕಾಯ್ದುಕೊಳ್ಳುವುದು ಅಗತ್ಯವಾಗಿದೆ.

ಉದ್ಯೋಗಿಗಳ ವಜಾ ಪ್ರಕ್ರಿಯೆಯಲ್ಲಿ ಕಾರ್ಮಿಕ ಕಾನೂನುಗಳನ್ನು ಪಾಲಿಸಲಾಗಿದೆಯೇ, ವಜಾಗೊಂಡವರಿಗೆ ಸೂಕ್ತ ನೋಟಿಸ್ ನೀಡಲಾಗಿದೆಯೇ, ನಿಯಮ ಉಲ್ಲಂಘನೆ ಕುರಿತು ಲಿಖಿತ ದಾಖಲೆಗಳಿವೆಯೇ ಹಾಗೂ ಎಲ್ಲ 24 ಉದ್ಯೋಗಿಗಳ ವಿರುದ್ಧವೂ ಪ್ರತ್ಯೇಕವಾಗಿ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಲಾಗಿದೆಯೇ ಎಂಬ ಅಂಶಗಳು ತನಿಖೆಯಿಂದ ಸ್ಪಷ್ಟವಾಗಬೇಕಿದೆ.

ಮತ್ತೊಂದೆಡೆ, ಕೆಲಸ ಕಳೆದುಕೊಂಡ ಉದ್ಯೋಗಿಗಳು ಜಿಲ್ಲಾ ಕಾರ್ಮಿಕ ಅಧಿಕಾರಿಗಳನ್ನು ಭೇಟಿಯಾಗಿ ತಮ್ಮ ಅಹವಾಲು ಸಲ್ಲಿಸಲು ಮುಂದಾಗಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಈ ಹಿನ್ನೆಲೆಯಲ್ಲಿ ಕಾರ್ಮಿಕ ಇಲಾಖೆಯು ಎರಡೂ ಕಡೆಯ ಹೇಳಿಕೆಗಳನ್ನು ಪಡೆದು, ಉದ್ಯೋಗಿಗಳ ವಜಾ ಆದೇಶಗಳು, ಸಂಸ್ಥೆಯ ಆಂತರಿಕ ನಿಯಮಗಳು ಹಾಗೂ ಸಂಬಂಧಪಟ್ಟ ದಾಖಲೆಗಳನ್ನು ಪರಿಶೀಲಿಸುವ ಅಗತ್ಯವಿದೆ ಎಂಬ ಅಭಿಪ್ರಾಯ ವ್ಯಕ್ತವಾಗಿದೆ.

ಪ್ರಕರಣದಲ್ಲಿ ಪ್ರಮುಖವಾಗಿ ಬೆಂಗಳೂರಿನ ಕೇಂದ್ರ ಕಚೇರಿಯ ಆಡಳಿತ ಮಂಡಳಿಯ ಅಧಿಕೃತ ಸ್ಪಷ್ಟೀಕರಣ ಇನ್ನೂ ಲಭ್ಯವಾಗಬೇಕಿದೆ. 24 ಉದ್ಯೋಗಿಗಳನ್ನು ವಜಾಗೊಳಿಸುವ ನಿರ್ಧಾರಕ್ಕೆ ಕಾರಣವಾದ ನಿರ್ದಿಷ್ಟ ಘಟನೆಗಳು ಯಾವುವು, ಈ ನಿರ್ಧಾರ ಕೈಗೊಂಡ ಅಧಿಕಾರಿಗಳು ಯಾರು ಹಾಗೂ ಉದ್ಯೋಗಿಗಳ ವಿರುದ್ಧ ಇರುವುದಾಗಿ ಹೇಳಲಾಗುತ್ತಿರುವ ಸಾಕ್ಷ್ಯಾಧಾರಗಳು ಯಾವುವು ಎಂಬುದಕ್ಕೆ ಕೇಂದ್ರ ಕಚೇರಿಯ ಜವಾಬ್ದಾರಿಯುತ ಅಧಿಕಾರಿಗಳು ಉತ್ತರ ನೀಡಬೇಕಿದೆ.

ಸಂಸ್ಥೆಯ ನಿಯಮಗಳನ್ನು ನಿಜವಾಗಿಯೂ ಉಲ್ಲಂಘಿಸಿದ್ದರಿಂದಲೇ 24 ಮಂದಿ ಉದ್ಯೋಗ ಕಳೆದುಕೊಂಡಿದ್ದಾರೆಯೇ ಅಥವಾ ವಜಾ ಪ್ರಕ್ರಿಯೆಯ ಹಿಂದೆ ಬೇರೆ ಆಡಳಿತಾತ್ಮಕ ಕಾರಣಗಳಿವೆಯೇ ಎಂಬುದು ಸದ್ಯಕ್ಕೆ ಸ್ಪಷ್ಟವಾಗಿಲ್ಲ. ಯಾವುದೇ ಆರೋಪವನ್ನು ಪೂರ್ವನಿರ್ಧಾರಿತ ಸತ್ಯವೆಂದು ಪರಿಗಣಿಸದೆ, ಉದ್ಯೋಗಿಗಳು ಮತ್ತು ಸಂಸ್ಥೆಯ ಆಡಳಿತ ಮಂಡಳಿಯ ಹೇಳಿಕೆಗಳನ್ನು ದಾಖಲೆಗಳ ಆಧಾರದಲ್ಲಿ ಪರಿಶೀಲಿಸುವುದು ಅಗತ್ಯವಾಗಿದೆ.

ಸದ್ಯಕ್ಕೆ ರಾಯಚೂರು ಘಟಕದ ಜನರಲ್ ಮ್ಯಾನೇಜರ್ ಪ್ರಿಯಾಂಕಾ ನೀಡಿರುವ ಸ್ಪಷ್ಟೀಕರಣ ಮಾತ್ರ ಲಭ್ಯವಾಗಿದ್ದು, ಬೆಂಗಳೂರಿನ ಕೇಂದ್ರ ಕಚೇರಿಯ ಅಧಿಕೃತ ಪ್ರತಿಕ್ರಿಯೆ ಹಾಗೂ ಉದ್ಯೋಗಿಗಳ ವಜಾಕ್ಕೆ ಸಂಬಂಧಿಸಿದ ದಾಖಲೆಗಳ ಪರಿಶೀಲನೆ ಬಾಕಿ ಉಳಿದಿದೆ. 24 ಉದ್ಯೋಗಿಗಳ ವಜಾ ನಿರ್ಧಾರದ ಹಿಂದೆ ಯಾರ ಪಾತ್ರವಿದೆ, ಯಾವ ನಿಯಮಗಳನ್ನು ಉಲ್ಲಂಘಿಸಲಾಗಿದೆ ಹಾಗೂ ಕೈಗೊಂಡ ಕ್ರಮ ಕಾನೂನುಬದ್ಧವಾಗಿದೆಯೇ ಎಂಬ ಪ್ರಶ್ನೆಗಳಿಗೆ ಉತ್ತರ ಸಿಗಬೇಕಿದೆ. ಈ ಹಿನ್ನೆಲೆಯಲ್ಲಿ ಸಂಸ್ಥೆಯ ಉನ್ನತ ಆಡಳಿತ ಮಂಡಳಿಯ ಸ್ಪಷ್ಟೀಕರಣ ಮತ್ತು ಕಾರ್ಮಿಕ ಇಲಾಖೆಯ ಮುಂದಿನ ಕ್ರಮಗಳತ್ತ ಗಮನ ಹರಿದಿದೆ.

## ಕನ್ನಡ ಸಾಹಿತ್ಯ ಪರಿಷತ್ತಿಗೆ ಹೊಸ ಚೈತನ್ಯ ನೀಡಲು ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧೆ: ಜಾಣಗೆರೆ ವೆಂಕಟರಾಮಯ್ಯ



ರಾಯಚೂರು: ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಕಳೆದ ಹತ್ತು ವರ್ಷಗಳಿಂದ ಅಧಿಕಾರಶಾಹಿಗಳ ಪ್ರಾಬಲ್ಯ ಹೆಚ್ಚಾಗಿದ್ದು, ಸಾಹಿತ್ಯಿಕ ಚಟುವಟಿಕೆಗಳು ಹಿನ್ನೆಲೆಗೆ ಸರಿದಿವೆ. ಪರಿಷತ್ತನ್ನು ಮತ್ತೆ ಸಾಹಿತಿಗಳು ಹಾಗೂ ಕನ್ನಡಾಭಿಮಾನಿಗಳ ಸಂಸ್ಥೆಯನ್ನಾಗಿ ರೂಪಿಸುವ ಉದ್ದೇಶದಿಂದ ಮುಂಬರುವ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಸ್ಥಾನದ ಚುನಾವಣೆಯಲ್ಲಿ ಸ್ಪರ್ಧಿಸಲು ನಿರ್ಧರಿಸಿದ್ದೇನೆ ಎಂದು ಸಾಹಿತಿ ಜಾಣಗೆರೆ ವೆಂಕಟರಾಮಯ್ಯ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕನ್ನಡ ಭಾಷೆ, ಸಾಹಿತ್ಯ ಮತ್ತು ಸಂಸ್ಕೃತಿಯ ಬೆಳವಣಿಗೆಗೆ ಶ್ರಮಿಸಬೇಕಾದ ಪರಿಷತ್ತು ಕಳೆದ ಒಂದು ದಶಕದಿಂದ ಅಧಿಕಾರಶಾಹಿಗಳ ಹಿಡಿತಕ್ಕೆ ಸಿಲುಕಿ ತನ್ನ ಮೂಲ ಆಶಯಗಳಿಂದ ದೂರ ಸರಿದಿದೆ. ಪರಿಷತ್ತಿನ ಆಡಳಿತ ವ್ಯವಸ್ಥೆಯಲ್ಲಿ ಉಂಟಾಗಿರುವ ಲೋಪದೋಷಗಳನ್ನು ಸರಿಪಡಿಸಿ, ಅದರ ಹಿಂದಿನ ಘನತೆ ಮರುಸ್ಥಾಪಿಸಲು ಸಾಹಿತಿಗಳು ಒಗ್ಗಟ್ಟಿನ ನಿರ್ಧಾರ ಕೈಗೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಸಾಹಿತಿಗಳ ಒಮ್ಮತದ ಅಭ್ಯರ್ಥಿಯಾಗಿ ಚುನಾವಣಾ ಕಣಕ್ಕಿಳಿಯುತ್ತಿರುವುದಾಗಿ ಹೇಳಿದರು.

ಒಂದು ಕಾಲದಲ್ಲಿ ಕನ್ನಡ ಭಾಷೆ ಮತ್ತು ನಾಡಿನ ಹಿತಾಸಕ್ತಿಗೆ ಸಂಬಂಧಿಸಿದ ಹೋರಾಟಗಳಿಗೆ ಸಾಹಿತ್ಯ ಪರಿಷತ್ತು ಪ್ರಮುಖ ವೇದಿಕೆಯಾಗಿತ್ತು. ಕನ್ನಡಪರ ಸಂಘಟನೆಗಳು ಹಾಗೂ ಸಾಹಿತಿಗಳು ಪರಿಷತ್ತಿನತ್ತ ವಿಶ್ವಾಸದಿಂದ ನೋಡುವ ಪರಿಸ್ಥಿತಿಯಿತ್ತು. ಆದರೆ ಇತ್ತೀಚಿನ ವರ್ಷಗಳಲ್ಲಿ ಸಾಹಿತ್ಯ ಚಟುವಟಿಕೆಗಳಿಗಿಂತ ಇತರ ವಿಷಯಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಅವರು ಅಸಮಾಧಾನ ವ್ಯಕ್ತಪಡಿಸಿದರು.

ಪರಿಷತ್ತಿನ ಆಡಳಿತದಲ್ಲಿನ ಅವ್ಯವಸ್ಥೆಗಳ ಕುರಿತು ಸಾಹಿತಿಗಳು ಸರ್ಕಾರದ ಗಮನ ಸೆಳೆದ ಪರಿಣಾಮ ಆಡಳಿತಾಧಿಕಾರಿಯನ್ನು ನೇಮಿಸಲಾಗಿತ್ತು. ಚುನಾವಣಾಧಿಕಾರಿಯ 2ನೇ ಪುಟಕ್ಕೆ

## ಶಿಕ್ಷಕರ ಹಿತಕಾಯಲು ಕಾಂಗ್ರೆಸ್ ಬದ್ಧ: ಎ. ವಸಂತಕುಮಾರ



ರಾಯಚೂರು: ಈಶಾನ್ಯ ಶಿಕ್ಷಕರ ಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರ ಪರವಾಗಿ ವಿಧಾನ ಪರಿಷತ್ ಸದಸ್ಯ ಹಾಗೂ ಕೆಪಿಸಿಸಿ ಕಾರ್ಯಾಧ್ಯಕ್ಷ ಎ. ವಸಂತಕುಮಾರ ಅವರು ನಗರದ ಎಲ್.ವಿ.ಡಿ. ಮಹಾವಿದ್ಯಾಲಯದಲ್ಲಿ ಉಪನ್ಯಾಸಕರನ್ನು ಭೇಟಿಯಾಗಿ ಮತಯಾಚಿಸಿದರು.

ಮಹಾವಿದ್ಯಾಲಯದ ಬೋಧಕ ಸಿಬ್ಬಂದಿಯೊಂದಿಗೆ ಸಂವಾದ ನಡೆಸಿದ ಅವರು, ಶಿಕ್ಷಕರ ಸಮಸ್ಯೆಗಳಿಗೆ ಸ್ಪಂದಿಸುವುದು ಹಾಗೂ ಶಿಕ್ಷಣ ಕ್ಷೇತ್ರವನ್ನು ಬಲಪಡಿಸುವುದು ಕಾಂಗ್ರೆಸ್ ಸರ್ಕಾರದ ಪ್ರಮುಖ ಆದ್ಯತೆಯಾಗಿದೆ. ಶಿಕ್ಷಕರ ವೃತ್ತಿಪರ ಹಿತಾಸಕ್ತಿಗಳ ರಕ್ಷಣೆ, ಸೇವಾ ಭದ್ರತೆ ಮತ್ತು ಶೈಕ್ಷಣಿಕ ಸಂಸ್ಥೆಗಳ ಅಭಿವೃದ್ಧಿಗೆ ಸರ್ಕಾರ ಹಲವು ಕ್ರಮಗಳನ್ನು ಕೈಗೊಳ್ಳುತ್ತಿದೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿ (ಕೆಕೆಆರ್‌ಡಿಬಿ) ಮೂಲಕ ಜಾರಿಗೊಳಿಸಲಾಗುತ್ತಿರುವ ಅಕ್ಷರ ಆವಿಷ್ಕಾರ ಯೋಜನೆಯಿಂದ ಈ ಭಾಗದ ಶಿಕ್ಷಣ ವ್ಯವಸ್ಥೆಯಲ್ಲಿ ಮಹತ್ವದ ಬದಲಾವಣೆ ತರಲು ಪ್ರಯತ್ನಿಸಲಾಗುತ್ತಿದೆ. ಶಾಲಾ ಕಾಲೇಜುಗಳ ಮೂಲಸೌಕರ್ಯ ಅಭಿವೃದ್ಧಿ, ಶೈಕ್ಷಣಿಕ ಗುಣಮಟ್ಟ ಸುಧಾರಣೆ ಹಾಗೂ ಶಿಕ್ಷಕರ ಕೊರತೆ ನೀಗಿಸುವ ನಿಟ್ಟಿನಲ್ಲಿ ಸರ್ಕಾರ ಕಾರ್ಯಪ್ರವೃತ್ತವಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಸುಮಾರು 15 ಸಾವಿರ ಶಿಕ್ಷಕರ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗಿದ್ದು, ಪದವಿ ಕಾಲೇಜುಗಳು ಹಾಗೂ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಭರ್ತಿಗೂ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. ಶಿಕ್ಷಣ ಕ್ಷೇತ್ರದ ಪ್ರಗತಿಯೊಂದಿಗೆ ಶಿಕ್ಷಕರ ಗೌರವ ಮತ್ತು ಹಕ್ಕುಗಳನ್ನು ಕಾಪಾಡಲು ಕಾಂಗ್ರೆಸ್ ಪಕ್ಷ ಬದ್ಧವಾಗಿದೆ ಎಂದು ಪ್ರತಿಪಾದಿಸಿದರು.

ಕಾಂಗ್ರೆಸ್ ಅಭ್ಯರ್ಥಿ ಶರಣಪ್ಪ ಮಟ್ಟೂರು ಅವರು ಈ ಹಿಂದೆ ಒಂದು ಅವಧಿಗೆ ವಿಧಾನ ಪರಿಷತ್ ಸದಸ್ಯರಾಗಿ ಸೇವೆ ಸಲ್ಲಿಸಿದ್ದು, ಶಿಕ್ಷಕರ ಸಮಸ್ಯೆಗಳನ್ನು ಸದನದಲ್ಲಿ ಪ್ರಸ್ತಾಪಿಸುವ ಮೂಲಕ ಅವರ ಪರವಾಗಿ 2ನೇ ಪುಟಕ್ಕೆ

## ಗಾಂಜಾ ಮಾರಾಟ ಪ್ರಕರಣ:

## ಮೂವರಿಗೆ ಒಂದು ವರ್ಷ ಕಠಿಣ ಕಾರಾಗೃಹ ಶಿಕ್ಷೆ



ರಾಯಚೂರು: ಸಾರ್ವಜನಿಕ ಸ್ಥಳದಲ್ಲಿ ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿದ್ದ ಪ್ರಕರಣದಲ್ಲಿ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ಮೂವರು ಆರೋಪಿಗಳಿಗೆ ತಲಾ ಒಂದು ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ₹25 ಸಾವಿರ ದಂಡ ವಿಧಿಸಿ ರಾಯಚೂರಿನ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ ತೀರ್ಪು ನೀಡಿದೆ.

ರಾಯಚೂರು ಗ್ರಾಮೀಣ ಪೊಲೀಸ್ ಠಾಣೆ ವ್ಯಾಪ್ತಿಯ ಮನ್ಸಲಾಪುರ ರಾಯಚೂರು ರಸ್ತೆಯ ಮನ್ಸಲಾಪುರ ರೈಲ್ವೆ ಗೇಟ್ ಸಮೀಪದ ಸಾರ್ವಜನಿಕ ಸ್ಥಳದಲ್ಲಿ ಉಮೇಶ ಹಾಗೂ ಇತರ ಇಬ್ಬರು ಆರೋಪಿಗಳು ಅಕ್ರಮವಾಗಿ ಗಾಂಜಾ ಮಾರಾಟ ಮಾಡುತ್ತಿರುವ ಕುರಿತು ಪೊಲೀಸರಿಗೆ ಖಚಿತ ಮಾಹಿತಿ ಲಭಿಸಿತ್ತು. ಈ ಮಾಹಿತಿ ಆಧರಿಸಿ ಪೊಲೀಸರು ದಾಳಿ ನಡೆಸಿ ಆರೋಪಿಗಳನ್ನು ವಶಕ್ಕೆ ಪಡೆದುಕೊಂಡಿದ್ದರು.

ದಾಳಿ ಸಂದರ್ಭದಲ್ಲಿ ಆರೋಪಿಗಳಿಂದ 1.08 ಕೆ.ಜಿ. ಒಣ ಗಾಂಜಾ, 514 ಗ್ರಾಂ ಹಸಿ ಗಾಂಜಾ, ಮೂರು ಮೊಬೈಲ್ ಫೋನ್‌ಗಳು ಹಾಗೂ ₹300 ನಗದು ವಶಪಡಿಸಿಕೊಳ್ಳಲಾಗಿತ್ತು. ಈ ಸಂಬಂಧ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯಲ್ಲಿ 2024ರಲ್ಲಿ ಗುನ್ನೆ ಸಂಖ್ಯೆ 76/2024ರ ಅಡಿಯಲ್ಲಿ ಎನ್‌ಡಿಪಿಎಸ್ ಕಾಯ್ದೆಯ ಕಲಂ 20(ಬಿ) ಪ್ರಕಾರ ಪ್ರಕರಣ ದಾಖಲಿಸಲಾಗಿತ್ತು.

ಪ್ರಕರಣದ ತನಿಖೆಯನ್ನು ಅಂದಿನ ರಾಯಚೂರು ಗ್ರಾಮೀಣ ಪೊಲೀಸ್ ಠಾಣೆಯ ಉಪನಿರೀಕ್ಷಕರಾಗಿದ್ದ, ಪ್ರಸ್ತುತ ಯರಗೇರಾ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಕಾಶ ರೆಡ್ಡಿ ಡಂಬಲ್ ಅವರು ಕೈಗೊಂಡಿದ್ದರು. ಸಮಗ್ರ ತನಿಖೆ ನಡೆಸಿ ಆರೋಪಿಗಳ ವಿರುದ್ಧ ಎನ್‌ಡಿಪಿಎಸ್ ಕಾಯ್ದೆ 1985ರ ಕಲಂ 20(b)(ii)(b) ಹಾಗೂ 20(a) ಅಡಿಯಲ್ಲಿ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಬಿ.ಬಿ. ಜಕಾತಿ ಅವರು ಸಾಕ್ಷ್ಯಾಧಾರಗಳು ಹಾಗೂ ವಾದ-ಪ್ರತಿವಾದಗಳನ್ನು ಪರಿಶೀಲಿಸಿ ಮೂವರು ಆರೋಪಿಗಳ ವಿರುದ್ಧ ಆರೋಪ ಸಾಬೀತಾಗಿರುವುದನ್ನು ಪರಿಗಣಿಸಿ ತಲಾ ಒಂದು ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ ₹25 ಸಾವಿರ ದಂಡ ವಿಧಿಸಿ ಆದೇಶಿಸಿದ್ದಾರೆ.

ಪ್ರಕರಣದಲ್ಲಿ ದೂರುದಾರರಾದ ಪೊಲೀಸ್ ಸಿಬ್ಬಂದಿ ರವಿರಾಜ (ಸಿಎಚ್‌ಸಿ-320) ಹಾಗೂ ದಾಳಿಯಲ್ಲಿ ಭಾಗವಹಿಸಿದ್ದ ಜಿ. ಶ್ರೀನಿವಾಸ (ಎಎಸ್‌ಐ) ಅವರು ನ್ಯಾಯಾಲಯದಲ್ಲಿ ಪೂರಕ ಸಾಕ್ಷ್ಯ ನುಡಿದಿದ್ದರು. ಪೊಲೀಸ್ ಸಿಬ್ಬಂದಿಗಳಾದ ಸುಗಯ್ಯ (ಸಿಪಿಸಿ-157), ಮಲ್ಲಿಕಾರ್ಜುನ (ಸಿಪಿಸಿ-360) ಹಾಗೂ ಮುಸ್ತಫಾ (ಸಿಪಿಸಿ-632) ಅವರು ಸಾಕ್ಷಿದಾರರನ್ನು ನಿಗದಿತ ಸಮಯಕ್ಕೆ ನ್ಯಾಯಾಲಯಕ್ಕೆ ಹಾಜರುಪಡಿಸುವಲ್ಲಿ ಕಾರ್ಯನಿರ್ವಹಿಸಿದ್ದರು.

ವಿಚಾರಣೆಯ ಹಂತದಲ್ಲಿ ರಾಯಚೂರು ಗ್ರಾಮೀಣ ವೃತ್ತದ ಪೊಲೀಸ್ ವೃತ್ತ ನಿರೀಕ್ಷಕ ನಿಂಗಪ್ಪ ಎನ್.ಆರ್. ಅವರು ಮೇಲ್ವಿಚಾರಣೆ ವಹಿಸಿದ್ದರು. ಸರ್ಕಾರದ ಪರವಾಗಿ ಪ್ರಧಾನ ಸಾರ್ವಜನಿಕ ಅಭಿಯೋಜಕ ಕೆ. ಗೋಪಾಲರಾವ್ ಅವರು ವಾದ ಮಂಡಿಸಿದ್ದರು ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿಯ ಪ್ರಕಟಣೆ ತಿಳಿಸಿದೆ.

## ಮಕ್ಕಳ ಸಾಹಿತ್ಯ ಕೃತಿಗಳಿಗೆ ರಾಜ್ಯಮಟ್ಟದ ಪ್ರಶಸ್ತಿ: ನವೆಂಬರ್ 10ರೊಳಗೆ ಪುಸ್ತಕ ಸಲ್ಲಿಸಲು ಆಹ್ವಾನ

ರಾಯಚೂರು: ಮಕ್ಕಳ ಸಾಹಿತ್ಯಕ್ಕೆ ಹೆಚ್ಚಿನ ಪ್ರೋತ್ಸಾಹ ನೀಡುವ ಹಾಗೂ ಬಾಲಸಾಹಿತ್ಯ ಕ್ಷೇತ್ರದಲ್ಲಿ ಸಾಧನೆ ಮಾಡಿದ ಲೇಖಕರನ್ನು ಗುರುತಿಸುವ ಉದ್ದೇಶದಿಂದ ಕರ್ನಾಟಕ ರಾಜ್ಯ ಮಕ್ಕಳ ಸಾಹಿತ್ಯ ಪರಿಷತ್ತು ಹಾಗೂ ಸಿಂಧನೂರಿನ ಚೆಲುವ ಚಿಣ್ಣರು ಮಕ್ಕಳ ತ್ರೈಮಾಸಿಕ ಸಾಹಿತ್ಯ ಪತ್ರಿಕೆ ಜಂಟಿಯಾಗಿ ರಾಜ್ಯಮಟ್ಟದ ಚೆಲುವ ಚಿಣ್ಣರು ಪುಸ್ತಕ ಬಹುಮಾನಕ್ಕೆ ಕೃತಿಗಳನ್ನು ಆಹ್ವಾನಿಸಿವೆ ಎಂದು ಪರಿಷತ್ತಿನ ರಾಜ್ಯ ಸಂಘಟನಾ ಕಾರ್ಯದರ್ಶಿ ಶಂಕರದೇವರು ಹಿರೇಮಠ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 2022ರಿಂದ 2025ರವರೆಗೆ ಪ್ರಕಟಗೊಂಡ ಮಕ್ಕಳ ಸಾಹಿತ್ಯ ಪುಸ್ತಕಗಳನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದು. ಮಕ್ಕಳ ಕವನ ಸಂಕಲನ ಹಾಗೂ ಮಕ್ಕಳ ಕಥಾ ಸಂಕಲನ ವಿಭಾಗಗಳಲ್ಲಿ ಪ್ರತ್ಯೇಕವಾಗಿ ಪ್ರಶಸ್ತಿ ನೀಡಲಾಗುವುದು. ಆಯ್ಕೆಯಾಗುವ ಕೃತಿಗಳ ಲೇಖಕರಿಗೆ ತಲಾ ₹3 ಸಾವಿರ ನಗದು, ಪ್ರಶಸ್ತಿ ಫಲಕ ಹಾಗೂ ಸನ್ಮಾನ ಪತ್ರ ನೀಡಿ ಗೌರವಿಸಲಾಗುವುದು ಎಂದು ಹೇಳಿದರು.



ಸಲ್ಲಿಸಲು ಕೊನೆಯ ದಿನವಾಗಿದ್ದು, ನಿಗದಿತ ಅವಧಿಯೊಳಗೆ ತಲುಪುವಂತೆ ಕಳುಹಿಸಬೇಕು. ಸ್ಪರ್ಧೆಗೆ ಬಂದ ಪುಸ್ತಕಗಳನ್ನು ಹಿಂದಿರುಗಿಸಲಾಗುವುದಿಲ್ಲ. ಪ್ರಶಸ್ತಿ ಆಯ್ಕೆಯಲ್ಲಿ ತೀರ್ಪುಗಾರರ ಸಮಿತಿಯ ನಿರ್ಧಾರವೇ ಅಂತಿಮವಾಗಿರುತ್ತದೆ ಎಂದು ಸ್ಪಷ್ಟಪಡಿಸಿದರು.

ಆಸಕ್ತ ಲೇಖಕರು ತಮ್ಮ ಕೃತಿಗಳನ್ನು ಶಂಕರದೇವರು ಹಿರೇಮಠ, ಶ್ರೀ ಶಿವನಿಲಯ, ಮನೆ ಸಂಖ್ಯೆ 6-1-122, ನಗರಸಭೆ ಹತ್ತಿರ, ಕೋಟೆ, ಸಿಂಧನೂರು584128, ರಾಯಚೂರು ಜಿಲ್ಲೆ ಎಂಬ ವಿಳಾಸಕ್ಕೆ ಕಳುಹಿಸಬಹುದು ಎಂದು ಮಾಹಿತಿ ನೀಡಿದರು.

ಇದೇ ವೇಳೆ ಮಕ್ಕಳ ದಿನಾಚರಣೆಯ ಪ್ರಯುಕ್ತ ವಿದ್ಯಾರ್ಥಿಗಳ ಸೃಜನಶೀಲ 2ನೇ ಪುಟಕ್ಕೆ

## ಬಿಜೆಪಿ ಅಲ್ಪಸಂಖ್ಯಾತರ ಮೋರ್ಚಾದಿಂದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಜನ್ಮದಿನಾಚರಣೆ



ರಾಯಚೂರು, ಅ.15: ಭಾರತದ ಮಾಜಿ ರಾಷ್ಟ್ರಪತಿ, ಭಾರತ ರತ್ನ ಪುರಸ್ಕೃತ ಹಾಗೂ ಖ್ಯಾತ ವಿಜ್ಞಾನಿ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಅವರ ಜನ್ಮದಿನವನ್ನು ಭಾರತೀಯ ಜನತಾ ಪಾರ್ಟಿಯ ಜಿಲ್ಲಾ ಅಲ್ಪಸಂಖ್ಯಾತರ ಮೋರ್ಚಾ ವತಿಯಿಂದ ಗುರುವಾರ ನಗರದ ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಆಚರಿಸಲಾಯಿತು.

ಬಿಜೆಪಿ ಅಲ್ಪಸಂಖ್ಯಾತರ ಮೋರ್ಚಾದ ಜಿಲ್ಲಾಧ್ಯಕ್ಷ ಶ್ರೀಪಾಲ್ ಕೋಟಾರಿ ಅವರ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಡಾ. ಕಲಾಂ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಗೌರವ ನಮನ ಸಲ್ಲಿಸಲಾಯಿತು. ದೇಶದ ವೈಜ್ಞಾನಿಕ ಪ್ರಗತಿ, ಶಿಕ್ಷಣ ಕ್ಷೇತ್ರ ಹಾಗೂ ಯುವಜನರ ಭವಿಷ್ಯ ರೂಪಿಸುವಲ್ಲಿ ಕಲಾಂ ಅವರು ನೀಡಿದ ಕೊಡುಗೆಗಳನ್ನು ಸ್ಮರಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಬಿಜೆಪಿ ಮುಖಂಡರು, ಸಾಮಾನ್ಯ ಕುಟುಂಬದಿಂದ ಬಂದ ಡಾ. ಅಬ್ದುಲ್ ಕಲಾಂ ಅವರು ತಮ್ಮ ಪರಿಶ್ರಮ, ಜ್ಞಾನ ಮತ್ತು ಸಾಧನೆಯ ಮೂಲಕ ದೇಶದ ಅತ್ಯುನ್ನತ ರಾಷ್ಟ್ರಪತಿ ಹುದ್ದೆಯನ್ನು ಅಲಂಕರಿಸಿದರು. ವಿಜ್ಞಾನಿಯಾಗಿ ಭಾರತದ ರಕ್ಷಣಾ ಮತ್ತು ಬಾಹ್ಯಾಕಾಶ ತಂತ್ರಜ್ಞಾನ ಕ್ಷೇತ್ರಗಳ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸಿದ್ದ ಅವರು, ತಮ್ಮ ಸರಳ 2ನೇ ಪುಟಕ್ಕೆ

# ಅ. 20ರಂದು ಶ್ರೀ ಸಿದ್ದರಾಮೇಶ್ವರ ವೃತ್ತದಲ್ಲಿ ಆಯುಧ ಪೂಜಾ ಮಹೋತ್ಸವ

ರಾಯಚೂರು: ಕರ್ನಾಟಕ ರಾಜ್ಯ ಭೋವಿ (ವಡ್ಡರ) ಸಂಘದ ಜಿಲ್ಲಾ ಸಮಿತಿ ವತಿಯಿಂದ ಅಕ್ಟೋಬರ್ 20ರಂದು ಮಂಗಳವಾರ ಬೆಳಿಗ್ಗೆ 9.30ಕ್ಕೆ ನಗರದ ಮಂತ್ರಾಲಯ ರಸ್ತೆಯಲ್ಲಿರುವ ಶ್ರೀ ಸಿದ್ದರಾಮೇಶ್ವರ ವೃತ್ತದಲ್ಲಿ ಆಯುಧ ಪೂಜಾ ಮಹೋತ್ಸವವನ್ನು ಹಮ್ಮಿಕೊಳ್ಳಲಾಗಿದೆ.

ಶಾಲಿವಾಹನ ಶಕೆ 1948ರ ಪರಾಭವ ಸಂವತ್ಸರದ ಆಶ್ವೀಜ ಶುದ್ಧ ನವಮಿಯ ಅಂಗವಾಗಿ ಸಾಂಪ್ರದಾಯಿಕ ವಿಧಿವಿಧಾನಗಳೊಂದಿಗೆ ವಿಶೇಷ ಪೂಜೆ ನೆರವೇರಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಸಮಾಜದ ಜನರನ್ನು ಒಗ್ಗೂಡಿಸುವ ಹಾಗೂ ಧಾರ್ಮಿಕ ಪರಂಪರೆಯನ್ನು ಮುಂದುವರಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಸಂಘದ ಪದಾಧಿಕಾರಿಗಳು ತಿಳಿಸಿದ್ದಾರೆ.

ಈ ಸಂದರ್ಭದಲ್ಲಿ ಶ್ರೀ ಸಿದ್ದರಾಮೇಶ್ವರರಿಗೆ ವಿಶೇಷ ಪೂಜೆ ಸಲ್ಲಿಸಲಾಗುವುದು. ಭೋವಿ ಸಮಾಜದ ಮುಖಂಡರು, ಹಿರಿಯರು, ಮಹಿಳೆಯರು, ಯುವಕರು ಹಾಗೂ ಭಕ್ತರು ಕುಟುಂಬ ಸಮೇತರಾಗಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ್ದಾರೆ.

ಸಂಘದ ಜಿಲ್ಲಾಧ್ಯಕ್ಷ ನಾರಾಯಣ ಸ್ವಾಮಿ, ತಾಲೂಕು ಅಧ್ಯಕ್ಷ ಎಸ್. ಶಿವರಾಜ ಪೂರತಿಪ್ಲಿ ಹಾಗೂ ಜಿಲ್ಲಾ ಮತ್ತು ತಾಲೂಕು ಸಮಿತಿಯ ಪದಾಧಿಕಾರಿಗಳು ಪ್ರಕಟಣೆಯ ಮೂಲಕ ಸಮಾಜದ ಬಾಂಧವರು ಮತ್ತು ಸಾರ್ವಜನಿಕರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿದ್ದಾರೆ.

# ಅ. 17ರಂದು ವಿದ್ಯುತ್ ಗ್ರಾಹಕರ ಸಂವಾದ ಸಭೆ

ರಾಯಚೂರು ಅ. 15 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಕಚೇರಿ, ಕೆ.ಇ.ಬಿ ಕ್ವರ್ಸ್, ಡಿ.ಸಿ ಮನೆ ಎದುರುಗಡೆ, ಲಿಂಗಸೂಗೂರು ರೋಡ್ ರಾಯಚೂರಿನಲ್ಲಿ ಅಕ್ಟೋಬರ್ 17ರ ಬೆಳಿಗ್ಗೆ 11ಗಂಟೆಗೆ ಗ್ರಾಹಕರ ಸಂವಾದ ಸಭೆಯನ್ನು ಹಮ್ಮಿಕೊಳ್ಳಲಾಗಿದ್ದು, ವಿದ್ಯುತ್ ಗ್ರಾಹಕರು ವಿದ್ಯುತ್ ದೂರುಗಳ ಬಗ್ಗೆ ಸಭೆಗೆ ಹಾಜರಾಗಿ ದೂರನ್ನು ಇತ್ಯರ್ಥಪಡಿಸಿಕೊಳ್ಳಲು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕರ್ನಾಟಕ ಸಮಾಜ ಸೇವಾ ರತ್ನ ಪ್ರಶಸ್ತಿಗೆ ಕೆ. ಹನುಮಂತಪ್ಪ ಯಾದವ್ ಆಯ್ಕೆ



ರಾಯಚೂರು, ಅ.15: ರಾಯಚೂರು ಜಿಲ್ಲಾ ಯಾದವ ಸಂಘದ ಜಿಲ್ಲಾಧ್ಯಕ್ಷ ಹಾಗೂ ಜಿಲ್ಲಾ ಹಿಂದುಳಿದ ಜಾತಿಗಳ ಒಕ್ಕೂಟದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಕೆ. ಹನುಮಂತಪ್ಪ ಯಾದವ್ ಅವರು ರಾಜ್ಯಮಟ್ಟದ ಕರ್ನಾಟಕ ಸಮಾಜ ಸೇವಾ ರತ್ನ ಪ್ರಶಸ್ತಿಗೆ ಆಯ್ಕೆಯಾಗಿದ್ದಾರೆ ಎಂದು ಕಲಾ ಸಂಕುಲ ಸಂಸ್ಥೆಯ ಕಾರ್ಯದರ್ಶಿ ಮಾರುತಿ ಬಡಿಗೇರ್ ತಿಳಿಸಿದ್ದಾರೆ.

ಕಳೆದ ಹಲವು ವರ್ಷಗಳಿಂದ ಸಾಮಾಜಿಕ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿರುವ 75 ವರ್ಷದ ಹಿರಿಯ ಸಮಾಜ ಸೇವಕ ಹನುಮಂತಪ್ಪ ಯಾದವ್ ಅವರು ಸಮಾಜ ಸೇವಾ ಕ್ಷೇತ್ರದಲ್ಲಿ ಸಲ್ಲಿಸಿರುವ ಅನುಪಮ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಮಾಜಿಕ ಸಂಘಟನೆಗಳ ಮೂಲಕ ಸಾರ್ವಜನಿಕ ಸೇವೆಯಲ್ಲಿ ತೊಡಗಿಸಿಕೊಂಡಿರುವ ಹನುಮಂತಪ್ಪ ಯಾದವ್ ಅವರು ಯಾದವ ಸಮಾಜದ ಸಂಘಟನೆ ಹಾಗೂ ಹಿಂದುಳಿದ ವರ್ಗಗಳ ಒಕ್ಕೂಟದ ಚಟುವಟಿಕೆಗಳಲ್ಲಿ ತಮ್ಮನ್ನು ತೊಡಗಿಸಿಕೊಂಡಿದ್ದಾರೆ. ಸಮಾಜದ ಅಭಿವೃದ್ಧಿ ಹಾಗೂ ಸಂಘಟನಾತ್ಮಕ ಕಾರ್ಯಗಳಲ್ಲಿ ಅವರ ಸೇವೆಯನ್ನು ಪರಿಗಣಿಸಿ ರಾಜ್ಯಮಟ್ಟದ ಗೌರವಕ್ಕೆ ಆಯ್ಕೆ ಮಾಡಲಾಗಿದೆ.

ನವೆಂಬರ್ 8ರಂದು ರಾಯಚೂರಿನ ರಂಗಮಂದಿರದಲ್ಲಿ ಕಲಾ ಸಂಕುಲ ಸಂಸ್ಥೆ ವತಿಯಿಂದ ಆಯೋಜಿಸಿರುವ ದೇಸಿ ಸಂಭ್ರಮ ಕಾರ್ಯಕ್ರಮದಲ್ಲಿ ಕೆ. ಹನುಮಂತಪ್ಪ ಯಾದವ್ ಅವರಿಗೆ ಕರ್ನಾಟಕ ಸಮಾಜ ಸೇವಾ ರತ್ನ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು ಎಂದು ಮಾರುತಿ ಬಡಿಗೇರ್ ತಿಳಿಸಿದ್ದಾರೆ.

**ಅಮೃತ ವಾಣಿ**

**ಬೀಗುವದಕ್ಕಿಂತ ಪರಿಸ್ಥಿತಿಗೆ ಅನುಸಾರವಾಗಿ ಬಾಗಿ ನಡೆದರೆ ಬದುಕು ಸುಂದರವಾಗುತ್ತದೆ.**

**1617 ನೇಯ ದಿನಕ್ಕೆ ಏಮ್ಸ್ ಹೋರಾಟ**

# 65ನೇ ಜನ್ಮದಿನದ ಅಂಗವಾಗಿ ಓಂ ಸಾಯಿ ಧ್ಯಾನ ಮಂದಿರಕ್ಕೆ ಸಿ. ನಂಜಪ್ಪ ಭೇಟಿ



ರಾಯಚೂರು: ಕರ್ನಾಟಕ ರಾಜ್ಯ ಮಡಿವಾಳ ಸಂಘದ ರಾಜ್ಯಾಧ್ಯಕ್ಷ ಹಾಗೂ ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದ ಅಧ್ಯಕ್ಷ ಸಿ. ನಂಜಪ್ಪ ಅವರು ತಮ್ಮ 65ನೇ ಜನ್ಮದಿನದ ಅಂಗವಾಗಿ ಗುರುವಾರ ನಗರದ ಹಿಂದೂನಮಂನಲ್ಲಿರುವ ಓಂ ಸಾಯಿ ಧ್ಯಾನ ಮಂದಿರಕ್ಕೆ ಭೇಟಿ ನೀಡಿ, ಶಿರಡಿ ಸಾಯಿಬಾಬಾರ ದರ್ಶನ ಪಡೆದು ವಿಶೇಷ ಪೂಜೆ ಸಲ್ಲಿಸಿದರು.

ಮೊದಲ ಬಾರಿಗೆ ಮಂದಿರಕ್ಕೆ ಆಗಮಿಸಿದ ನಂಜಪ್ಪ ಅವರನ್ನು ಮಂದಿರದ ಸಂಸ್ಥಾಪಕ ಧರ್ಮಾಧಿಕಾರಿ ಸಾಯಿಕಿರಣ್ ಗುರುಜಿ ಆತ್ಮೀಯವಾಗಿ ಬರಮಾಡಿಕೊಂಡರು. ಬಳಿಕ ಶಾಲು ಹೊದಿಸಿ, ಸನ್ಮಾನಿಸುವ ಮೂಲಕ ಜನ್ಮದಿನದ ಶುಭಾಶಯಗಳನ್ನು ತಿಳಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಾಯಿಕಿರಣ್ ಗುರುಜಿ, ಸಮಾಜದ ಅಭಿವೃದ್ಧಿ ಹಾಗೂ ಜನಸೇವೆಯಲ್ಲಿ ತೊಡಗಿಸಿಕೊಂಡಿರುವ ನಂಜಪ್ಪ ಅವರಿಗೆ ಉತ್ತಮ ಆರೋಗ್ಯ, ದೀರ್ಘಾಯುಷ್ಯ ಮತ್ತು ನೆಮ್ಮದಿಯ ಜೀವನ ದೊರೆಯಲಿ. ಅವರ ಸಾಮಾಜಿಕ ಹಾಗೂ ಸಾರ್ವಜನಿಕ ಸೇವಾ ಕಾರ್ಯಗಳು ಮತ್ತಷ್ಟು ವಿಸ್ತಾರಗೊಳ್ಳಲಿ ಎಂದು ಹಾರೈಸಿದರು.

ಜನ್ಮದಿನದ ಹಿನ್ನೆಲೆಯಲ್ಲಿ ಮಂದಿರದಲ್ಲಿ ಸಾಯಿಬಾಬಾರಿಗೆ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು. ನಂಜಪ್ಪ ಅವರ ಮುಂದಿನ ಜೀವನ ಸುಖ, ಶಾಂತಿ ಮತ್ತು ಸಮೃದ್ಧಿಯಿಂದ ಕೂಡಿರಲಿ ಎಂದು ಪ್ರಾರ್ಥಿಸಲಾಯಿತು.

ಕಾರ್ಯಕ್ರಮದಲ್ಲಿ ಹಿರಿಯ ಕಾಂಗ್ರೆಸ್ ಮುಖಂಡ ಹಾಗೂ ಮಾಜಿ ನಗರಸಭಾ ಸದಸ್ಯ ಜಿ. ಶಿವಮೂರ್ತಿ, ಕಾಂಗ್ರೆಸ್ ಯುವ ಮುಖಂಡ ಜಿ. ಕೇಶವಮೂರ್ತಿ ಉಪಸ್ಥಿತರಿದ್ದು, ನಂಜಪ್ಪ ಅವರಿಗೆ ಜನ್ಮದಿನದ ಶುಭಾಶಯಗಳನ್ನು ಕೋರಿದರು.

# ಬೆಳೆಯುವ ಮಕ್ಕಳಿಗೆ ರುಚಿಕರವಾದ ಆಹಾರ ನೀಡಿ: ಜಿ.ಪಂ. ಸಿಇಓ ಈಶ್ವರ ಕುಮಾರ್



ರಾಯಚೂರು ಅ. 15 (ಕರ್ನಾಟಕ ವಾರ್ತೆ): ಅಡುಗೆ ಕೋಣೆ ಮತ್ತು ಆಹಾರದ ಸ್ವಚ್ಛತೆಯನ್ನು ಕಾಪಾಡುವ ಮೂಲಕ ಬೆಳೆಯುವ ಮಕ್ಕಳಿಗೆ ಸಮತೋಲಿತ ಮತ್ತು ರುಚಿಕರವಾದ ಒಳ್ಳೆಯ ಆಹಾರ ನೀಡಬೇಕೆಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ ಅವರು ಹೇಳಿದರು.

ಅಕ್ಟೋಬರ್ 15ರ ಗುರುವಾರದಂದು ರಾಯಚೂರು ನಗರದ ಡಾ. ಬಿ.ಆರ್. ಅಂಬೇಡ್ಕರ್ ಮತ್ತು ಡಾ. ಬಾಬು ಜಗಜೀವನ್ ರಾಮ್ ಅವರ ಸಮುದಾಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗ, ಪರಿಶಿಷ್ಟ ವರ್ಗ, ಅಲ್ಪಸಂಖ್ಯಾತರ ಕಲ್ಯಾಣ ಹಾಗೂ ಕ್ರೈಸ್ ವಸತಿ ಶಾಲೆಯ ಅಧೀನದಲ್ಲಿರುವ ಖಾಯಂ / ಹೊರಸಂಪನ್ಮೂಲ ಡಿ-ಗ್ರೂಪ್ ಸಿಬ್ಬಂದಿಗಳಿಗೆ ಅಡುಗೆ ತಯಾರಿಸುವ ಮತ್ತು ಸ್ವಚ್ಛತೆಯನ್ನು ಕಾಪಾಡುವ ಕುರಿತು ಮೂರು ದಿನಗಳ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಸರಕಾರ ವಿದ್ಯಾರ್ಥಿಗಳ ವಸತಿ ನಿಲಯಗಳಿಗೆ ದಿನಸಿ, ಸೋಪು, ಪೇಸ್ಟ್, ಅಡುಗೆ ಅನಿಲ ಸೇರಿ ಅಗತ್ಯ ಸೌಲಭ್ಯಗಳನ್ನು ನೀಡುತ್ತದೆ. ಸಿಬ್ಬಂದಿ ಶುಚಿ, ರುಚಿಯಾದ ಅಡುಗೆ ತಯಾರಿಸಿ ವಿದ್ಯಾರ್ಥಿಗಳೊಂದಿಗೆ ತಾವು ಅವರ ಪೋಷಕರಂತೆ ಹೊಂದಾಣಿಕೆ ಮಾಡಿಕೊಂಡು ಅವರ ಕಷ್ಟಸುಖಗಳಲ್ಲಿ ಭಾಗಿಯಾಗಬೇಕು ಎಂದರು.

ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಸಂಖ್ಯೆ ಸುಮಾರು ಶೇ. 40ರಷ್ಟಿದ್ದು, ಜಿಲ್ಲೆಯಲ್ಲಿ ಅಪೌಷ್ಟಿಕತೆ ಮತ್ತು ರಕ್ತಹೀನತೆಯಂತಹ (ಅನೀಮಿಯಾ) ಸಮಸ್ಯೆಗಳು ಇನ್ನೂ ಉಳಿದಿದ್ದು, ಇವುಗಳನ್ನು ಹೋಗಲಾಡಿಸಲು ಶಿಕ್ಷಣದ ಜೊತೆಗೆ ಶಾಲೆ, ಅಂಗನವಾಡಿ, ವಸತಿ ನಿಲಯ ಹಾಗೂ ವಸತಿ ಶಾಲೆಗಳ ಮೇಲೆ ವಿಶೇಷ ಗಮನ ಹರಿಸಲಾಗುತ್ತಿದೆ.

ಮಕ್ಕಳಿಗೆ ಗುಣಮಟ್ಟದ ಶಿಕ್ಷಣದೊಂದಿಗೆ ಉತ್ತಮ ಆರೋಗ್ಯ ಮತ್ತು ಬೌದ್ಧಿಕ ಬೆಳವಣಿಗೆಯನ್ನು ಕಲ್ಪಿಸುವ ಉದ್ದೇಶದಿಂದ, ಸರ್ಕಾರಿ ಸಂಸ್ಥೆಗಳಾದ ಶಾಲೆ, ಅಂಗನವಾಡಿ ಮತ್ತು ವಸತಿ ಶಾಲೆಗಳಲ್ಲಿ ಬಿಸಿಯೂಟ ಕಾರ್ಯಕ್ರಮವನ್ನು ಅತ್ಯಂತ ಪರಿಣಾಮಕಾರಿಯಾಗಿ ಜಾರಿಗೊಳಿಸಲಾಗುತ್ತಿದೆ ಎಂದರು.

ಶಿಕ್ಷಣವು ಕೇವಲ ಮೂಲಭೂತ ಅವಶ್ಯಕತೆಯಾಗಿರದೆ, ಪ್ರತಿಯೊಬ್ಬರಿಗೂ ತಲುಪುವಂತಾಗಬೇಕು. ಹಾಗೂ ಬಡ ಮತ್ತು ಹಿಂದುಳಿದ ವರ್ಗಗಳ ಮಕ್ಕಳು ಶಾಲೆಗೆ ಹಾಜರಾಗಿ ಉತ್ತಮ ಶಿಕ್ಷಣ ಪಡೆಯುವಂತೆ ಮಾಡುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ. ಹಲವು ತಿಂಗಳಿಂದ ಜಿಲ್ಲೆಯ ಕೆಲವು ವಸತಿ ಶಾಲೆಗಳು ಮತ್ತು ಹಾಸ್ಟೆಲ್‌ಗಳಲ್ಲಿ ಆಹಾರ ಹಾಗೂ ನೈರ್ಮಲ್ಯಕ್ಕೆ ಸಂಬಂಧಿಸಿದಂತೆ ದೂರುಗಳು ಬಂದಿರುವುದು ನಮ್ಮ ಗಮನಕ್ಕೆ ಬಂದಿದೆ. ಇಂತಹ ಘಟನೆಗಳು ಮರುಕಳಿಸದಂತೆ ಎಚ್ಚರಿಕೆ ವಹಿಸಲು ಹಾಗೂ ಯಾವುದೇ ಅಹಿತಕರ ಘಟನೆಗಳು ಸಂಭವಿಸದಂತೆ ತಡೆಯಲು ಅಧಿಕಾರಿಗಳು, ಶಾಲಾ ಮುಖ್ಯಸ್ಥರು ಮತ್ತು ವಾರ್ಡನ್‌ಗಳು ಹೆಚ್ಚಿನ ಜಾಗರೂಕತೆಯಿಂದ ಕಾರ್ಯನಿರ್ವಹಿಸಬೇಕು ಎಂದರು.

ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿ ಡಾ. ನಂದಿತಾ ಎಂ.ಎನ್. ಅವರು ಮಾತನಾಡಿ, ಜಿಲ್ಲೆಯಲ್ಲಿ ಹೊಸತನದ ಹಾಗೂ ನಾವೀನ್ಯತೆಯ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಅಡುಗೆ ಸಿಬ್ಬಂದಿಗಳು ಮಕ್ಕಳಿಗೆ ಪ್ರೀತಿಯಿಂದ ಊಟ ಬಡಿಸುತ್ತಾ ಅವರೊಂದಿಗೆ ಬೆರೆತು ಮಾತನಾಡುವುದು ಅತ್ಯಗತ್ಯ ಎಂದರು.

ಮಕ್ಕಳು ಮನೆಯನ್ನು ಬಿಟ್ಟು ದೂರವಿರುವುದರಿಂದ ಕೆಲವೊಮ್ಮೆ ಖಿನ್ನತೆಗೆ ಒಳಗಾಗುತ್ತಾರೆ. ಅಡುಗೆ ಸಿಬ್ಬಂದಿಗಳು ಅವರೊಂದಿಗೆ ಸಮಯ ಕಳೆದು, ಅವರ ಭಾವನೆಗಳಿಗೆ ಸ್ಪಂದಿಸುವುದರಿಂದ ಮಕ್ಕಳಲ್ಲಿರುವ ಮಾನಸಿಕ ಒತ್ತಡವನ್ನು ಕಡಿಮೆ ಮಾಡಬಹುದಾಗಿದೆ ಎಂದರು.

ಇದಕ್ಕೂ ಮುಂಚೆ ಪ್ರಾಸ್ತಾವಿಕವಾಗಿ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಕೃಷ್ಣ ಶಾವಂತಗೇರ ಅವರು ಮಾತನಾಡಿ, ವಿದ್ಯಾರ್ಥಿ ನಿಲಯಗಳಲ್ಲಿ (ಹಾಸ್ಟೆಲ್) ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಉತ್ತಮ ಸೌಲಭ್ಯಗಳನ್ನು ನೀಡುವುದು ಮತ್ತು ರುಚಿಕರವಾದ, ಪೌಷ್ಟಿಕಾಂಶಯುಕ್ತ ಆಹಾರವನ್ನು ಒದಗಿಸುವುದು ನಮ್ಮೆಲ್ಲರ ಪ್ರಾಥಮಿಕ ಜವಾಬ್ದಾರಿಯಾಗಿದೆ ಎಂದರು.

ವಿದ್ಯಾರ್ಥಿ ನಿಲಯಗಳ ಅಚ್ಚುಕಟ್ಟು ನಿರ್ವಹಣೆಗೆ ವಾರ್ಡನ್‌ಗಳು, ಮುಖ್ಯ ಅಡುಗೆಯವರು, ಅಡುಗೆಯವರು, ಸಹಾಯಕರು ಹಾಗೂ ಸ್ವಚ್ಛತಾ ಸಿಬ್ಬಂದಿ ಪರಸ್ಪರ ಹೊಂದಾಣಿಕೆಯಿಂದ ಕಾರ್ಯನಿರ್ವಹಿಸಬೇಕು. ಪ್ರಸ್ತುತ ಇತರ ನಿಲಯಗಳಿಗೆ ಹೋಲಿಸಿದರೆ ರಾಯಚೂರು ಜಿಲ್ಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ದಾಖಲಾಗುತ್ತಿದ್ದು, ಎಲ್ಲರಿಗೂ ಉತ್ತಮ ಸೌಲಭ್ಯ ಕಲ್ಪಿಸಬೇಕು ಎಂದರು.

ಹಿಂದಿನ ಕಾಲದಲ್ಲಿ ಸೌಲಭ್ಯಗಳ ಕೊರತೆಗಳಿದ್ದರೂ ತಾಯಂದಿರು ಅಷ್ಟು ಪ್ರೀತಿಯಿಂದ ಅಡುಗೆ ಮಾಡಿ ಹಾಕುತ್ತಿದ್ದರು. ಅದೇ ರೀತಿಯ ಪ್ರೀತಿ ಮತ್ತು ಕಾಳಜಿಯನ್ನು ಇಂದಿನ ಸಿಬ್ಬಂದಿ ಕೂಡ ವಿದ್ಯಾರ್ಥಿಗಳ ಮೇಲೆ ತೋರಬೇಕು. ನಿಲಯಗಳಲ್ಲಿ ಯಾವುದೇ ಲೋಪಗಳಿಗೆ ಅವಕಾಶವಿಲ್ಲದಂತೆ, ಸಿಬ್ಬಂದಿ ತಮ್ಮ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕು ಎಂದರು.

ಇದಕ್ಕೂ ಮುಂಚೆ ಸಂವಿಧಾನ ಶಿಲ್ಪಿ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ವಿವಿಧ ಗಣ್ಯರಿಂದ ಮಾಲಾರ್ಪಣೆ ಮಾಡಿ, ಸಂವಿಧಾನ ಪೀಠಿಕೆಯನ್ನು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ ಅವರು ಬೋಧಿಸಿದರು.

ಇದೇ ಸಂದರ್ಭದಲ್ಲಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಪ್ರವೀಣ್ ಕುಮಾರ್, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ, ಭೋವಿ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ರವಿ ಸೇರಿದಂತೆ ವಿವಿಧ ವಸತಿ ಶಾಲೆಯ ಪ್ರಾಂಶುಪಾಲರು, ನಿಲಯ ಪಾಲಕರು, ಅಡುಗೆ ಸಿಬ್ಬಂದಿಗಳು, ಸಹಾಯಕರು ಇದ್ದರು.

## ಮೊದಲನೇ ಪುಟದಿಂದ

# ಕನ್ನಡ ಸಾಹಿತ್ಯ ಪರಿಷತ್ತಿಗೆ ಹೊಸ ಚೈತನ್ಯ ನೀಡಲು ಅಧ್ಯಕ್ಷ ಸ್ಥಾನಕ್ಕೆ ಸ್ಪರ್ಧೆ: ಜಾಣಗೆರೆ ವೆಂಕಟರಾಮಯ್ಯ

ನೇಮಕವಾಗಿದ್ದರೂ ಅರ್ಹ ಸದಸ್ಯರ ಪಟ್ಟಿಯನ್ನು ಸಿದ್ಧಪಡಿಸಲು ಸಾಧ್ಯವಾಗದಷ್ಟು ಆಡಳಿತ ವ್ಯವಸ್ಥೆ ಹದಗೆಟ್ಟಿದೆ. ಹಿಂದಿನ ಆಡಳಿತದ ವೈಫಲ್ಯವೇ ಇದಕ್ಕೆ ಕಾರಣ ಎಂದು ಆರೋಪಿಸಿದರು.

ಚುನಾವಣೆಯಲ್ಲಿ ಗೆಲುವು ಸಾಧಿಸಿದರೆ ಕನ್ನಡ ನಾಡು, ನುಡಿ ಹಾಗೂ ಸಾಹಿತ್ಯ ಕ್ಷೇತ್ರ ಎದುರಿಸುತ್ತಿರುವ ಪ್ರಮುಖ ಸಮಸ್ಯೆಗಳಿಗೆ ಆದ್ಯತೆ ನೀಡಲಾಗುವುದು. ಸಾಹಿತಿಗಳು, ಬರಹಗಾರರು ಹಾಗೂ ಕನ್ನಡಪರ ಚಿಂತಕರನ್ನು ಪರಿಷತ್ತಿನ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಲು ಅವಕಾಶ ಕಲ್ಪಿಸಲಾಗುವುದು. ಅಲ್ಲದೆ, ಪರಿಷತ್ತಿನ ಅಧ್ಯಕ್ಷರ ಅಧಿಕಾರಾವಧಿಯನ್ನು ಪ್ರಸ್ತುತ ಇರುವ ಐದು ವರ್ಷಗಳಿಂದ ಮತ್ತೆ ಮೂರು ವರ್ಷಗಳಿಗೆ ಇಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಭರವಸೆ ನೀಡಿದರು.

ಸಾಹಿತಿ ಪ್ರೊ. ಎಸ್.ಜಿ. ಸಿದ್ಧರಾಮಯ್ಯ ಮಾತನಾಡಿ, ಹಿಂದಿನ ಅಧ್ಯಕ್ಷ ಜೋಷಿ ಅವರು ತಮ್ಮ ಅಧಿಕಾರವನ್ನು ಉಳಿಸಿಕೊಳ್ಳಲು ಹಲವು ರೀತಿಯ ಪ್ರಯತ್ನಗಳನ್ನು ನಡೆಸಿದ್ದಾರೆ ಎಂದು ಆರೋಪಿಸಿದರು. ಸಾರಿಗೆ ಮತ್ತು ವಸತಿ ಸೌಲಭ್ಯಗಳು ಸಮರ್ಪಕವಾಗಿಲ್ಲದ ಗ್ರಾಮೀಣ ಪ್ರದೇಶಗಳಲ್ಲಿ ಸರ್ವಸದಸ್ಯರ ಸಭೆಗಳನ್ನು ಆಯೋಜಿಸುವ ಮೂಲಕ ಸದಸ್ಯರಿಗೆ ತೊಂದರೆ ಉಂಟುಮಾಡಲಾಗುತ್ತಿತ್ತು. ಜೋಷಿ ಅವರು ಚುನಾವಣೆಗೆ ಸ್ಪರ್ಧಿಸಿದ್ದ ಸಂದರ್ಭದಲ್ಲಿ ರಾಜಕೀಯ ಪಕ್ಷವೊಂದು ಬೆಂಬಲ ನೀಡಿತ್ತು ಎಂದು ಹೇಳಿದರು.

ಕನ್ನಡಸಾಹಿತ್ಯಪರಿಷತ್ತುರಾಜಕೀಯಪ್ರಭಾವಹಾಗೂಅಧಿಕಾರಶಾಹಿಗಳಹಿಡಿತದಿಂದಮುಕ್ತವಾಗಬೇಕಿದೆ. ಭ್ರಷ್ಟಾಚಾರದ ಆರೋಪ ಎದುರಿಸುತ್ತಿರುವವರು ಮತ್ತು ಕಳಂಕಿತ ಅಧಿಕಾರಿಗಳು ಪರಿಷತ್ತಿನ ಆಡಳಿತಕ್ಕೆ ಬರಬಾರದು ಎಂಬುದು ಸಾಹಿತಿಗಳ ಆಶಯವಾಗಿದೆ. ಸ್ಥಗಿತಗೊಂಡಿರುವ ಸಾಹಿತ್ಯಿಕ ಕಾರ್ಯಕ್ರಮಗಳಿಗೆ ಮತ್ತೆ ಚಾಲನೆ ನೀಡಿ, ಪರಿಷತ್ತನ್ನು ಜನಸಾಮಾನ್ಯರು ಹಾಗೂ ಸಾಹಿತ್ಯಾಸಕ್ತರಿಗೆ ಹತ್ತಿರವಾಗಿಸುವ ಉದ್ದೇಶದಿಂದ ಜಾಣಗೆರೆ ವೆಂಕಟರಾಮಯ್ಯ ಅವರನ್ನು ಅಭ್ಯರ್ಥಿಯಾಗಿ ಕಣಕ್ಕಿಳಿಸಲಾಗುತ್ತಿದೆ ಎಂದು ತಿಳಿಸಿದರು.

ಸಾಹಿತಿ ಡಾ. ವಸುಂಧರಾ ಭೂಪತಿ ಮಾತನಾಡಿ, ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ ಮಹಿಳೆಯರಿಗೆ ಇದುವರೆಗೂ ನಿರೀಕ್ಷಿತ ಪ್ರಾತಿನಿಧ್ಯ ಮತ್ತು ಸೂಕ್ತ ಸ್ಥಾನಮಾನ ದೊರೆತಿಲ್ಲ. ಸಾಹಿತ್ಯ ಕ್ಷೇತ್ರಕ್ಕೆ ಮಹಿಳೆಯರು ಮಹತ್ವದ ಕೊಡುಗೆ ನೀಡುತ್ತಿದ್ದರೂ ಪರಿಷತ್ತಿನ ಆಡಳಿತ ಹಾಗೂ ನಿರ್ಧಾರ ಕೈಗೊಳ್ಳುವ ಹಂತದಲ್ಲಿ ಅವರಿಗೆ ಹೆಚ್ಚಿನ ಅವಕಾಶಗಳು ಸಿಗಬೇಕಾಗಿದೆ. ಮುಂದಿನ ದಿನಗಳಲ್ಲಿ ಮಹಿಳಾ ಸಾಹಿತಿಗಳಿಗೆ ನ್ಯಾಯಯುತ ಪ್ರಾತಿನಿಧ್ಯ ದೊರೆಯುವಂತಾಗಬೇಕು ಎಂದು ಒತ್ತಾಯಿಸಿದರು.

ಪರಿಷತ್ತು ಕೆಲವೇ ವ್ಯಕ್ತಿಗಳ ಅಧಿಕಾರದ ಕೇಂದ್ರವಾಗದೆ, ಕನ್ನಡ ಭಾಷೆ ಮತ್ತು ಸಾಹಿತ್ಯದ ಅಭಿವೃದ್ಧಿಗೆ ಶ್ರಮಿಸುವ ಎಲ್ಲರಿಗೂ ಮುಕ್ತ ವೇದಿಕೆಯಾಗಬೇಕು. ಇದಕ್ಕಾಗಿ ಅಧಿಕಾರಶಾಹಿಗಳ ಪ್ರಾಬಲ್ಯಕ್ಕೆ ಕಡಿವಾಣ ಹಾಕುವುದು ಅಗತ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಸುದ್ದಿಗೋಷ್ಠಿಯಲ್ಲಿ ಸಾಹಿತಿಗಳಾದ ಆರ್.ಜಿ. ಹಳ್ಳಿ ನಾಗರಾಜ್, ಬಾಬು ಬಂಡಾರಿಗಲ್, ಭಗತ್‌ರಾಜ್ ನಿಜಾಮಕಾರಿ, ಡಾ. ಸುರೇಶ ಸಗರದ ಹಾಗೂ ರುದ್ರಯ್ಯ ಗುಣಾರಿ ಉಪಸ್ಥಿತರಿದ್ದರು.

# ಶಿಕ್ಷಕರ ಹಿತಕಾಯಲು ಕಾಂಗ್ರೆಸ್ ಬದ್ಧ: ಎ. ವಸಂತಕುಮಾರ

ಕಾರ್ಯನಿರ್ವಹಿಸಿದ್ದಾರೆ. ಶಿಕ್ಷಕರ ಬೇಡಿಕೆಗಳಿಗೆ ಮತ್ತಷ್ಟು ಪರಿಣಾಮಕಾರಿಯಾಗಿ ಧ್ವನಿಯಾಗಲು ಅವರಿಗೆ ಮತ್ತೊಂದು ಅವಕಾಶ ನೀಡಬೇಕು. ಈ ಹಿನ್ನೆಲೆಯಲ್ಲಿ ಮತದಾರರು ಶರಣಪ್ಪ ಮಟ್ಟೂರು ಅವರಿಗೆ ಪ್ರಥಮ ಪ್ರಾಶಸ್ತ್ಯದ ಮತ ನೀಡಿ ಗೆಲುವಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಅಬ್ದುಲ್ ಕರೀಂ, ಮಹಾನಗರ ಪಾಲಿಕೆಯ ಮಾಜಿ ಸದಸ್ಯ ಬಸವರಾಜ ದರೂರು, ಕೆಪಿಸಿಸಿ ವಕ್ತಾರ ಡಾ. ರಝಾಕ್ ಉಸ್ತಾದ್, ಭೀಮನಗೌಡ ಇಟಗಿ, ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಶರಣಗೌಡ ಬಿ.ಎಚ್. ಸೇರಿದಂತೆ ಉಪನ್ಯಾಸಕರು ಹಾಗೂ ಇತರರು ಉಪಸ್ಥಿತರಿದ್ದರು.

# ಮಕ್ಕಳ ಸಾಹಿತ್ಯ ಕೃತಿಗಳಿಗೆ ರಾಜ್ಯಮಟ್ಟದ ಪ್ರಶಸ್ತಿ: ನವೆಂಬರ್ 10ರೊಳಗೆ ಪುಸ್ತಕ ಸಲ್ಲಿಸಲು ಆಹ್ವಾನ

ಬರವಣಿಗೆಗೆ ವೇದಿಕೆ ಕಲ್ಪಿಸಲು ಮಕ್ಕಳ ಸ್ವರಚಿತ ಕವನಗಳ ಪ್ರಾತಿನಿಧಿಕ ಸಂಕಲನ ಹೊರತರಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಈ ಹಿಂದೆ ಮಕ್ಕಳ ಸಾಹಿತ್ಯವನ್ನು ಉತ್ತೇಜಿಸುವ ನಿಟ್ಟಿನಲ್ಲಿ ಶ್ರೀ ಗುರು ನಮನ, ಬಾರೋ ಬಾರೋ ಮಳೆರಾಯ ಮತ್ತು ಪಾಟಿ ಮೇಲೆ ಪಾಟಿ ನಮ್ ಸಾಲಿ ಸೂಟಿ ಎಂಬ ಕವನ ಸಂಕಲನಗಳನ್ನು ಪ್ರಕಟಿಸಲಾಗಿದೆ. ಈ ಪ್ರಯತ್ನವನ್ನು ಮುಂದುವರಿಸುವ ಉದ್ದೇಶದಿಂದ ಪ್ರಸಕ್ತ ವರ್ಷವೂ ವಿದ್ಯಾರ್ಥಿಗಳಿಂದ ಕವಿತೆಗಳನ್ನು ಸಂಗ್ರಹಿಸಿ ಪುಸ್ತಕ ರೂಪದಲ್ಲಿ ಪ್ರಕಟಿಸಲು ಸಿದ್ಧತೆ ನಡೆಸಲಾಗುತ್ತಿದೆ ಎಂದು ವಿವರಿಸಿದರು.

ಪ್ರಾಥಮಿಕ ಶಾಲೆ, ಪ್ರೌಢಶಾಲೆ ಹಾಗೂ ಪದವಿಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು ಕನ್ನಡ ಭಾಷೆಯಲ್ಲಿ ರಚಿಸಿದ ಸ್ವಂತ ಕವಿತೆಗಳನ್ನು ಕಳುಹಿಸಲು ಅವಕಾಶವಿದೆ. ಪ್ರತಿಯೊಬ್ಬ ವಿದ್ಯಾರ್ಥಿಯೂ ಒಂದು ಕವಿತೆಯನ್ನು ಮಾತ್ರ ಸಲ್ಲಿಸಬಹುದಾಗಿದೆ. ಕವಿತೆಯೊಂದಿಗೆ ವಿದ್ಯಾರ್ಥಿಯ ಭಾವಚಿತ್ರ, ಶಾಲೆಯಿಂದ ಪಡೆದ ದೃಢೀಕರಣ ಪತ್ರ, ಕವಿತೆಯ ಪ್ರಕಟಣೆಗೆ ಒಪ್ಪಿಗೆ ಪತ್ರ, ಪೂರ್ಣ ವಿಳಾಸ ಮತ್ತು ಸಂಪರ್ಕ ದೂರವಾಣಿ ಸಂಖ್ಯೆಯನ್ನು ಲಗತ್ತಿಸುವುದು ಕಡ್ಡಾಯವಾಗಿದೆ ಎಂದರು.

ಕವಿತೆಗಳು ಸ್ವಂತ ರಚನೆಯಾಗಿರಬೇಕು. ಯಾವುದೇ ವ್ಯಕ್ತಿ, ಜಾತಿ, ಧರ್ಮ, ಪ್ರದೇಶ ಅಥವಾ ವೃತ್ತಿಯ ಬಗ್ಗೆ ಅವಹೇಳನಕಾರಿ ಅಂಶಗಳನ್ನು ಒಳಗೊಂಡಿರಬಾರದು. ಸಂಕಲನಕ್ಕೆ ಆಯ್ಕೆಯಾಗಿ ಪ್ರಕಟವಾಗುವ ಕವಿತೆಗಳಿಗೆ ಸಂಭಾವನೆ ನೀಡಲಾಗುವುದಿಲ್ಲ. ಆದರೆ ಕವಿತೆ ಪ್ರಕಟಗೊಂಡ ಪ್ರತಿಯೊಬ್ಬ ವಿದ್ಯಾರ್ಥಿಗೂ ಪುಸ್ತಕದ ಗೌರವ ಪ್ರತಿಯನ್ನು ಉಚಿತವಾಗಿ ನೀಡಲಾಗುವುದು ಎಂದು ತಿಳಿಸಿದರು.

ವಿದ್ಯಾರ್ಥಿಗಳು ತಮ್ಮ ಕವನಗಳನ್ನು ಸಹ ಸಿಂಧನೂರಿನ ಶ್ರೀ ಶಿವನಿಲಯ ವಿಳಾಸಕ್ಕೆ ಕಳುಹಿಸಬಹುದು. ಪುಸ್ತಕ ಬಹುಮಾನ ಹಾಗೂ ಮಕ್ಕಳ ಕವನ ಸಂಕಲನಕ್ಕೆ ಸಂಬಂಧಿಸಿದ ಹೆಚ್ಚಿನ ಮಾಹಿತಿಗಾಗಿ 9686840266 ಅಥವಾ 9886002383 ಸಂಖ್ಯೆಗಳಿಗೆ ಸಂಪರ್ಕಿಸುವಂತೆ ಶಂಕರದೇವರು ಹಿರೇಮಠ ಮನವಿ ಮಾಡಿದರು.

ಸುದ್ದಿಗೋಷ್ಠಿಯಲ್ಲಿ ನರಸಿಂಹಲು ವಡವಟ್ಟಿ ಹಾಗೂ ಭ್ರಮೆನಂದ್ ರೆಡ್ಡಿ ಉಪಸ್ಥಿತರಿದ್ದರು.

# ಬಿಜೆಪಿ ಅಲ್ಪಸಂಖ್ಯಾತರ ಮೋರ್ಚಾದಿಂದ ಡಾ. ಎ.ಪಿ.ಜೆ. ಅಬ್ದುಲ್ ಕಲಾಂ ಜನ್ಮದಿನಾಚರಣೆ

ವ್ಯಕ್ತಿತ್ವ ಹಾಗೂ ಜನಸಾಮಾನ್ಯರೊಂದಿಗಿನ ಆತ್ಮೀಯ ಒಡನಾಟದಿಂದ ಜನಮನದಲ್ಲಿ ಶಾಶ್ವತ ಸ್ಥಾನ ಪಡೆದಿದ್ದಾರೆ ಎಂದು ಹೇಳಿದರು.

ದೇಶದ ಭವಿಷ್ಯ ಯುವಜನರ ಕೈಯಲ್ಲಿದೆ ಎಂಬ ದೃಢ ನಂಬಿಕೆ ಹೊಂದಿದ್ದ ಕಲಾಂ ಅವರು, ವಿದ್ಯಾರ್ಥಿಗಳಲ್ಲಿ ದೊಡ್ಡ ಕನಸು ಕಾಣುವ ಧೈರ್ಯ ತುಂಬಿದ್ದರು. ಶಿಕ್ಷಣದೊಂದಿಗೆ ಶಿಸ್ತು, ಪರಿಶ್ರಮ, ನೈತಿಕ ಮೌಲ್ಯಗಳು ಹಾಗೂ ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳುವಂತೆ ನಿರಂತರ ಪ್ರೇರಣೆ ನೀಡುತ್ತಿದ್ದರು. ಅವರ ಜೀವನ ಮತ್ತು ಸಾಧನೆ ಇಂದಿನ ಯುವಪೀಳಿಗೆಗೆ ಮಾದರಿಯಾಗಿವೆ ಎಂದು ಅಭಿಪ್ರಾಯಪಟ್ಟರು.

ಡಾ. ಕಲಾಂ ಅವರು ರಾಷ್ಟ್ರಪತಿಯಾಗಿದ್ದ ಅವಧಿಯಲ್ಲಿಯೂ ತಮ್ಮ ಸರಳತೆಯನ್ನು ಕಾಪಾಡಿಕೊಂಡು ಜನಸ್ನೇಹಿ ವ್ಯಕ್ತಿತ್ವದಿಂದ ಗುರುತಿಸಿಕೊಂಡಿದ್ದರು. ದೇಶದ ಅಭಿವೃದ್ಧಿಗೆ ವಿಜ್ಞಾನ ಮತ್ತು ತಂತ್ರಜ್ಞಾನದ ಜೊತೆಗೆ ಯುವಜನರ ಸೃಜನಶೀಲತೆ ಹಾಗೂ ಶಿಕ್ಷಣವೂ ಅಗತ್ಯ ಎಂಬ ಅವರ ಚಿಂತನೆ ಇಂದಿಗೂ ಪ್ರಸ್ತುತವಾಗಿದೆ. ಅವರ ಆಶಯಗಳನ್ನು ಸಾಕಾರಗೊಳಿಸಲು ಪ್ರತಿಯೊಬ್ಬರೂ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಬಿಜೆಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಸಂತೋಷ್ ರಾಜ್ ಗುರುವ್, ರವೀಂದ್ರ ಜಲ್ದಾರ್, ಯುವ ಮೋರ್ಚಾ ಜಿಲ್ಲಾಧ್ಯಕ್ಷ ಎನ್. ವಿನಾಯಕ ರಾವ್, ಹಿರಿಯ ಮುಖಂಡ ಮುಕ್ತಿಯಾರ್, ಅಲ್ಪಸಂಖ್ಯಾತರ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಮೊಹಮ್ಮದ್ ಹನೀಫ್, ಜಿಲ್ಲಾ ಉಪಾಧ್ಯಕ್ಷ ಫ್ರಾನ್ಸಿಸ್ ರಾಜ್, ಖಜಾಂಚಿ ಅವಿನಾಶ್ ರಂಕಾ ಜೈನ್, ಯುವ ಮೋರ್ಚಾ ಜಿಲ್ಲಾ ಪ್ರಧಾನ ಕಾರ್ಯದರ್ಶಿ ರವಿ ಗೌಡ ಮೀರಾಪುರ್ ಭಾಗವಹಿಸಿದ್ದರು.

ಇದೇ ವೇಳೆ ನರೇಶ್, ಈರೇಶ್, ಅನೋಲ್, ವೆಂಕಟೇಶ್, ರವಿಶಂಕರ್ ಬಾಬಾ, ನರಸಿಂಹಲು, ಶಶಿಧರ್, ಮಂಜು ಸೇರಿದಂತೆ ಪಕ್ಷದ ವಿವಿಧ ಘಟಕಗಳ ಪದಾಧಿಕಾರಿಗಳು, ಅಲ್ಪಸಂಖ್ಯಾತರ ಮೋರ್ಚಾದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಡಾ. ಅಬ್ದುಲ್ ಕಲಾಂ ಅವರ ದೇಶಪ್ರೇಮ, ಸರಳತೆ ಮತ್ತು ಸೇವಾ ಮನೋಭಾವವನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜ ಹಾಗೂ ರಾಷ್ಟ್ರದ ಅಭಿವೃದ್ಧಿಗೆ ಶ್ರಮಿಸುವ ಸಂಕಲ್ಪದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಂಡಿತು.

# ಪುರಾಣದ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಂಡರೆ ಬದುಕು ಸಾರ್ಥಕ: ಮಹಾಂತಲಿಂಗ ಶಿವಾಚಾರ್ಯ ಶ್ರೀಗಳು



ಮಾನ್ವಿ: ಮನುಷ್ಯನ ಹುಟ್ಟು ಮತ್ತು ಸಾವಿನ ನಡುವಿನ ಜೀವನವನ್ನು ಅರ್ಥಪೂರ್ಣವಾಗಿಸಿಕೊಳ್ಳಲು ಧಾರ್ಮಿಕ ಚಿಂತನೆ, ಆಧ್ಯಾತ್ಮಿಕ ಜ್ಞಾನ ಹಾಗೂ ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಳ್ಳುವುದು ಅಗತ್ಯವಾಗಿದೆ. ಪುರಾಣ ಪ್ರವಚನಗಳನ್ನು ಕೇವಲ ಆಲಿಸುವುದಕ್ಕೆ ಸೀಮಿತಗೊಳಿಸದೆ, ಅವುಗಳಲ್ಲಿನ ಆದರ್ಶಗಳನ್ನು ನಿತ್ಯ ಜೀವನದಲ್ಲಿ ಅನುಸರಿಸಿದಾಗ ಬದುಕು ಸುಂದರವಾಗುತ್ತದೆ ಎಂದು ನಂದವಾಡಗಿ ಆಳಂದ ಜಾಲವಾದಿಯ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ತಾಲೂಕಿನ ಕರೆಗುಡ್ಡ ಗ್ರಾಮದ ಶ್ರೀ ಮಹಾಂತೇಶ್ವರ ಮಠದಲ್ಲಿ ದಸರಾ ಮಹೋತ್ಸವದ ಅಂಗವಾಗಿ ಗುರುವಾರ ಹಮ್ಮಿಕೊಂಡಿದ್ದ ಶ್ರೀದೇವಿ ಪುರಾಣ ಪ್ರವಚನ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಕರೆಗುಡ್ಡ ಶ್ರೀಮಠವು ಈ ಭಾಗದ ಪ್ರಮುಖ ಧಾರ್ಮಿಕ ಹಾಗೂ ಆಧ್ಯಾತ್ಮಿಕ ಕೇಂದ್ರಗಳಲ್ಲಿ ಒಂದಾಗಿದ್ದು, ಅಂಬಾದೇವಿಯ ಆರಾಧನೆಯಿಂದ ಭಕ್ತರ ನಂಬಿಕೆಯ ಕ್ಷೇತ್ರವಾಗಿ ಗುರುತಿಸಿಕೊಂಡಿದೆ. ಇಲ್ಲಿ ಅಂಬಾದೇವಿಯ ಮಹಿಮೆಗೆ ಸಂಬಂಧಿಸಿದ ಅನೇಕ ವಿಶೇಷತೆಗಳಿವೆ ಎಂಬ ನಂಬಿಕೆ ಭಕ್ತರಲ್ಲಿದೆ. ಸಾಮಾನ್ಯವಾಗಿ ಅಡುಗೆ ಮಾಡುವಾಗ ಹೊಗೆ ಮತ್ತು ವಾಸನೆ ಸುತ್ತಮುತ್ತ ಹರಡುತ್ತದೆ. ಆದರೆ ಈ ಕ್ಷೇತ್ರದಲ್ಲಿ ಅಂತಹ ಅನುಭವವಾಗುವುದಿಲ್ಲ ಎಂಬುದು ಭಕ್ತರ ನಂಬಿಕೆಯಾಗಿದ್ದು, ಇದನ್ನು ದೇವಿಯ ಮಹಿಮೆಯಾಗಿ ಪರಿಗಣಿಸಲಾಗುತ್ತಿದೆ ಎಂದು ತಿಳಿಸಿದರು.

ನಂದವಾಡಗಿ ಆಳಂದ ಜಾಲವಾದಿಯ ಷ. ಬ್ರ. ಅಭಿನವ ಚನ್ನಬಸವ ಶಿವಾಚಾರ್ಯ ಮಹಾಸ್ವಾಮಿಗಳು ಮಾತನಾಡಿ, ಆಧ್ಯಾತ್ಮಿಕ ಚಿಂತನೆಯಿಂದ ಮನುಷ್ಯನ ಮನಸ್ಸು ಪರಿಶುದ್ಧಗೊಳ್ಳುತ್ತದೆ. ಪುರಾಣಗಳು ಧರ್ಮದ ಮಹತ್ವವನ್ನು ತಿಳಿಸುವುದರ ಜೊತೆಗೆ ಜೀವನದಲ್ಲಿ ಅನುಸರಿಸಬೇಕಾದ ನೀತಿ, ನಡವಳಿಕೆ ಮತ್ತು ಆದರ್ಶಗಳನ್ನು ಬೋಧಿಸುತ್ತವೆ. ಪ್ರತಿಯೊಬ್ಬರೂ ಪುರಾಣ ಪ್ರವಚನಗಳನ್ನು ಆಲಿಸಿ ಅವುಗಳ ಸಾರವನ್ನು ಬದುಕಿನಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಲೌಕಿಕ ಸುಖಭೋಗಗಳನ್ನು ತ್ಯಜಿಸಿ ಆಧ್ಯಾತ್ಮಿಕ ಸಾಧನೆಯ ಮೂಲಕ ಉನ್ನತ ಬದುಕನ್ನು ಕಟ್ಟಿಕೊಂಡ ಅಕ್ಕಮಹಾದೇವಿಯ ಜೀವನ ಎಲ್ಲರಿಗೂ ಆದರ್ಶವಾಗಿದೆ. ಅವರ ತ್ಯಾಗ, ಭಕ್ತಿ ಮತ್ತು ಆತ್ಮಜ್ಞಾನದ ಸಂದೇಶವನ್ನು ಇಂದಿನ ಸಮಾಜ ಅರಿತುಕೊಳ್ಳಬೇಕಿದೆ. ಧಾರ್ಮಿಕ ಪ್ರವಚನಗಳು ಜನರಲ್ಲಿ ಉತ್ತಮ ಸಂಸ್ಕಾರ ಬೆಳೆಸಲು ಸಹಕಾರಿಯಾಗುತ್ತವೆ ಎಂದು ಅಭಿಪ್ರಾಯಪಟ್ಟರು.

ಸಂತೆಕೆಲೂರಿನ ಘನಮಠೇಶ್ವರ ಮಠದ ಗುರುಬಸವ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಮನುಷ್ಯ ತನ್ನ ಬದುಕಿನಲ್ಲಿ ಪ್ರೀತಿ, ಕರುಣೆ, ಸಹಬಾಳ್ವೆ ಹಾಗೂ ಪರೋಪಕಾರದ ಗುಣಗಳನ್ನು ಬೆಳೆಸಿಕೊಳ್ಳಬೇಕು. ಇತರರ ಸಂಕಷ್ಟಗಳಿಗೆ ಸ್ಪಂದಿಸುವ ಮನೋಭಾವ ಹೊಂದಿದಾಗ ಮಾತ್ರ ಮಾನವ ಜನ್ಮ ಸಾರ್ಥಕವಾಗುತ್ತದೆ ಎಂದು ಹೇಳಿದರು.

ರೈತರ ಸಂಕಷ್ಟದ ಕುರಿತು ಪ್ರಸ್ತಾಪಿಸಿದ ಅವರು, ನೀರಾವರಿ ಸೌಲಭ್ಯಗಳಿರುವ ಪ್ರದೇಶಗಳಲ್ಲಿಯೂ ಸಮರ್ಪಕ ನೀರು ದೊರೆಯದೆ ರೈತರು ತೊಂದರೆ ಅನುಭವಿಸುತ್ತಿರುವುದು ನೋವಿನ ಸಂಗತಿಯಾಗಿದೆ. ಹೊಲಗಳಿಗೆ ನೀರು ಹರಿಯಬೇಕಾದ ಸಂದರ್ಭದಲ್ಲಿ ರೈತರ ಕಣ್ಣಲ್ಲಿ ಕಣ್ಣೀರು ಹರಿಯುವ ಪರಿಸ್ಥಿತಿ ನಿರ್ಮಾಣವಾಗಿದೆ. ದೇಶದ ಅನ್ನದಾತರಾದ ರೈತರ ಬದುಕು ಸುಧಾರಿಸಬೇಕು. ಕೃಷಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿ ರೈತ ಕುಟುಂಬಗಳಲ್ಲಿ ನೆಮ್ಮದಿ ನೆಲೆಸಲಿ ಎಂದು ಆಶಿಸಿದರು.

ಮನುಷ್ಯನಲ್ಲಿರುವ ಅಹಂಕಾರವೇ ಅನೇಕ ಸಮಸ್ಯೆಗಳಿಗೆ ಕಾರಣವಾಗುತ್ತದೆ. 'ನಾನು' ಎಂಬ ಸ್ವಾರ್ಥದ ಮನೋಭಾವವನ್ನು ಬಿಟ್ಟು 'ನೀನು' ಎಂಬ ಪ್ರೀತಿ ಮತ್ತು ಗೌರವದ ಭಾವನೆ ಬೆಳೆಸಿಕೊಂಡಾಗ ಸಂಬಂಧಗಳು ಗಟ್ಟಿಯಾಗುತ್ತವೆ. ಕುಟುಂಬ ಹಾಗೂ ಸಮಾಜದಲ್ಲಿ ಪರಸ್ಪರ ವಿಶ್ವಾಸ, ಸಹಕಾರ ಮತ್ತು ಹೊಂದಾಣಿಕೆ ಇದ್ದಾಗ ಮಾತ್ರ ಶಾಂತಿ ನೆಲೆಸಲು ಸಾಧ್ಯ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಗಾನಯೋಗಿ, ಶಿವಯೋಗಿ ಪದ್ಮಭೂಷಣ ಡಾ. ಪಂಡಿತ್ ಪುಟ್ಟರಾಜ ಗುರುವರ್ಯರ ಶಿಷ್ಯತ್ರಯರಲ್ಲಿ ಒಬ್ಬರಾದ ನಂದವಾಡಗಿಯ ವೇ. ಮೂ. ಮಹಾಂತೇಶ ಶಾಸ್ತ್ರಿಗಳು ಶ್ರೀದೇವಿ ಪುರಾಣ ಪ್ರವಚನ ನೀಡುತ್ತಿದ್ದಾರೆ. ಕರೆಗುಡ್ಡದ ಗಾನಕೋಗಿಲೆ ಅಮರೇಶ ಗವಾಯಿ ಸಾಲಿಮಠ ಪುರಾಣ ಪಠಣ ಮಾಡುತ್ತಿದ್ದು, ನಾಗಡದಿನ್ನಿಯ ಬಸವರಾಜಯ್ಯ ಹಿರೇಮಠ ತಬಲಾ ವಾದನದ ಮೂಲಕ ಸಂಗೀತ ಸಾಥ್ ನೀಡುತ್ತಿದ್ದಾರೆ. ಭಕ್ತಿ ಸಂಗೀತದೊಂದಿಗೆ ನಡೆಯುತ್ತಿರುವ ಪುರಾಣ ಕಾರ್ಯಕ್ರಮ ಭಕ್ತರ ಗಮನ ಸೆಳೆಯುತ್ತಿದೆ.

ದಸರಾ ಮಹೋತ್ಸವದ ಅಂಗವಾಗಿ ಅಕ್ಟೋಬರ್ 24ರಂದು ಸಂಜೆ 5 ಗಂಟೆಗೆ ವಿವಿಧ ವಾದ್ಯಮೇಳಗಳೊಂದಿಗೆ ಸುಮಂಗಲಿಯರ ಸಮ್ಮುಖದಲ್ಲಿ ಶ್ರೀಮಠದ ಮಹಾರಥೋತ್ಸವ ವಿಜೃಂಭಣೆಯಿಂದ ಜರುಗಲಿದೆ. ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಥೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ಕರೆಗುಡ್ಡ ಶ್ರೀಮಠದ ಪೀಠಾಧಿಪತಿ ಷ. ಬ್ರ. ಮಹಾಂತಲಿಂಗ ಶಿವಾಚಾರ್ಯ ಮಹಾಸ್ವಾಮಿಗಳು ಮನವಿ ಮಾಡಿದರು.

# ಮಕ್ಕಳ ಆರೋಗ್ಯ ರಕ್ಷಣೆಗೆ ಪೌಷ್ಟಿಕ ಆಹಾರ, ಲಸಿಕೆ ಮತ್ತು ಸ್ವಚ್ಛತೆ ಅಗತ್ಯ: ಪುಂಡಲಿಕ ಗಂಜಿ



ರಾಯಚೂರು: ಬಾಲ್ಯದಿಂದಲೇ ಹೆಣ್ಣು ಮತ್ತು ಗಂಡು ಮಕ್ಕಳ ನಡುವೆ ಯಾವುದೇ ತಾರತಮ್ಯ ಮಾಡದೆ ಸಮಾನವಾಗಿ ಪೌಷ್ಟಿಕ ಆಹಾರ, ಆರೋಗ್ಯ ಸೇವೆ ಹಾಗೂ ಶಿಕ್ಷಣ ಒದಗಿಸಬೇಕು. ಮಕ್ಕಳಿಗೆ ನಿಗದಿತ ಅವಧಿಯಲ್ಲಿ ಲಸಿಕೆ ಹಾಕಿಸುವುದರ ಜೊತೆಗೆ ವೈಯಕ್ತಿಕ ಶುಚಿತ್ವಕ್ಕೆ ಆದ್ಯತೆ ನೀಡಿದಾಗ ಮಾತ್ರ ಆರೋಗ್ಯವಂತ ಮತ್ತು ಸದೃಢ ಸಮಾಜ ನಿರ್ಮಾಣ ಸಾಧ್ಯ ಎಂದು ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ಪುಂಡಲಿಕ ಗಂಜಿ ಹೇಳಿದರು.

ನಗರದ ಸಿಯಾತಲಾಬ್ ನಗರ ಪ್ರಾಥಮಿಕ ಆರೋಗ್ಯ ಕೇಂದ್ರದ ವ್ಯಾಪ್ತಿಯ ಅಂಗನವಾಡಿ ಕೇಂದ್ರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಗುರುವಾರ ಆಯೋಜಿಸಿದ್ದ ತಾಯಿ ಮತ್ತು ಮಗುವಿನ ಸುರಕ್ಷತೆ, ಪೌಷ್ಟಿಕ ಆಹಾರ ಹಾಗೂ ನೈರ್ಮಲ್ಯ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳನ್ನು ಬಾಲ್ಯದಲ್ಲಿ ಕಾಡುವ ವಿವಿಧ ಸಾಂಕ್ರಾಮಿಕ ರೋಗಗಳಿಂದ ರಕ್ಷಿಸಲು ಸರ್ಕಾರದ ಲಸಿಕಾ ಕಾರ್ಯಕ್ರಮ ಅತ್ಯಂತ ಮಹತ್ವದ್ದಾಗಿದೆ. ಪಾಲಕರು ಮಕ್ಕಳಿಗೆ ನಿಗದಿತ ವೇಳಾಪಟ್ಟಿಯಂತೆ ಲಸಿಕೆಗಳನ್ನು ತಪ್ಪದೆ ಹಾಕಿಸಬೇಕು. ಗರ್ಭಿಣಿಯರು, ಹಾಲುಣಿಸುವ ತಾಯಂದಿರು ಹಾಗೂ ಕಿಶೋರಿಯರು ತಮ್ಮ ಆರೋಗ್ಯದ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ತಿಳಿಸಿದರು.

ಆರೋಗ್ಯಕರ ಜೀವನಕ್ಕೆ ಸಮತೋಲಿತ ಆಹಾರ ಸೇವನೆ ಮತ್ತು ಸ್ವಚ್ಛತೆ ಪ್ರಮುಖವಾಗಿವೆ. ಆಹಾರ ಸೇವಿಸುವ ಮೊದಲು ಸಾಬೂನಿನಿಂದ ಕೈಗಳನ್ನು ಸ್ವಚ್ಛವಾಗಿ ತೊಳೆಯಬೇಕು. ದೈನಂದಿನ ಆಹಾರದಲ್ಲಿ ಪೌಷ್ಟಿಕ ಪದಾರ್ಥಗಳು, ತಾಜಾ ಹಣ್ಣು ಮತ್ತು ತರಕಾರಿಗಳನ್ನು ಬಳಸಬೇಕು. ಶುದ್ಧ ಕುಡಿಯುವ ನೀರು ಸೇವಿಸುವುದರ ಜೊತೆಗೆ ಮನೆಯ ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಕ್ಕಳಲ್ಲಿ ಕಂಡುಬರುವ ಅತಿಸಾರ, ನ್ಯುಮೋನಿಯಾ, ಬಾಲ್ಯ ಕ್ಷಯರೋಗ ಹಾಗೂ ಡಿಫ್ತೀರಿಯಾದಂತಹ ಕಾಯಿಲೆಗಳ ಲಕ್ಷಣಗಳ ಬಗ್ಗೆ ಪಾಲಕರು ಜಾಗೃತರಾಗಿರಬೇಕು. ಮಲೇರಿಯಾ, ಡೆಂಗ್ಯೂ, ಚಿಕೂನ್‌ಗುನ್ಯಾ ಮತ್ತು ಆನೆಕಾಲು ರೋಗ ಹರಡುವ ಸೊಳ್ಳೆಗಳ ನಿಯಂತ್ರಣಕ್ಕೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು. ಕಲುಷಿತ ನೀರು ಮತ್ತು ಆಹಾರ ಸೇವನೆಯಿಂದ ವಾಂತಿಭೇದಿ ಹಾಗೂ ಕಾಲರಾದಂತಹ ರೋಗಗಳು ಹರಡುವ ಸಾಧ್ಯತೆಯಿರುವುದರಿಂದ ಸಾರ್ವಜನಿಕರು ಎಚ್ಚರಿಕೆ ವಹಿಸಬೇಕು ಎಂದು ತಿಳಿಸಿದರು.

ಅಂಗನವಾಡಿ ಕೇಂದ್ರಗಳ ಮೂಲಕ ದೊರೆಯುವ ಪೌಷ್ಟಿಕ ಆಹಾರ, ಪ್ರಧಾನಮಂತ್ರಿ ಮಾತೃ ವಂದನಾ ಯೋಜನೆ, ಭಾಗ್ಯಲಕ್ಷ್ಮಿ ಯೋಜನೆ ಸೇರಿದಂತೆ ತಾಯಿ ಮತ್ತು ಮಕ್ಕಳ ಕಲ್ಯಾಣಕ್ಕಾಗಿ ಜಾರಿಯಲ್ಲಿರುವ ವಿವಿಧ ಸರ್ಕಾರಿ ಸೌಲಭ್ಯಗಳ ಕುರಿತು ಮಾಹಿತಿ ನೀಡಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ನಾಗರಾಜ ಜಗತಾಪ್ ಮಾತನಾಡಿ, ಕುಟುಂಬ ಕಲ್ಯಾಣ ಯೋಜನೆಗಳಡಿ ಲಭ್ಯವಿರುವ ತಾತ್ಕಾಲಿಕ ಹಾಗೂ ಶಾಶ್ವತ ವಿಧಾನಗಳ ಬಗ್ಗೆ ದಂಪತಿಗಳು ಅರಿವು ಹೊಂದಬೇಕು. ಮಕ್ಕಳ ಜನನದ ನಡುವೆ ಕನಿಷ್ಠ ಮೂರು ವರ್ಷಗಳ ಅಂತರ ಕಾಯ್ದುಕೊಳ್ಳುವುದು ತಾಯಿ ಮತ್ತು ಮಗುವಿನ ಆರೋಗ್ಯಕ್ಕೆ ಅನುಕೂಲಕರವಾಗಿದೆ ಎಂದು ಹೇಳಿದರು.

ಗರ್ಭಿಣಿಯರು ಗರ್ಭಧಾರಣೆಯ ಆರಂಭಿಕ ಹಂತದಲ್ಲಿಯೇ ಆರೋಗ್ಯ ಕೇಂದ್ರದಲ್ಲಿ ನೋಂದಣಿ ಮಾಡಿಸಿಕೊಂಡು ನಿಯಮಿತವಾಗಿ ಆರೋಗ್ಯ ತಪಾಸಣೆ ಹಾಗೂ ವೈದ್ಯಕೀಯ ಸಲಹೆಯಂತೆ ಅಗತ್ಯ ಲಸಿಕೆಗಳನ್ನು ಪಡೆಯಬೇಕು. ಮಕ್ಕಳ ಬೆಳವಣಿಗೆಯ ಮೇಲೂ ನಿಗಾ ವಹಿಸಿ, ನಿಗದಿತ ಸಮಯದಲ್ಲಿ ಲಸಿಕೆ ಹಾಕಿಸುವ ಮೂಲಕ ರೋಗಗಳಿಂದ ರಕ್ಷಿಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮಕ್ಕೂ ಮುನ್ನ ಮಕ್ಕಳಿಗೆ ವಿವಿಧ ರೋಗಗಳ ವಿರುದ್ಧ ಲಸಿಕೆ ನೀಡಲಾಯಿತು. ಬಳಿಕ ಗರ್ಭಿಣಿಯರು, ಹಾಲುಣಿಸುವ ತಾಯಂದಿರು ಹಾಗೂ ಕಿಶೋರಿಯರಿಗೆ ಪೌಷ್ಟಿಕ ಆಹಾರ, ಸ್ವಚ್ಛತೆ, ಸಾಂಕ್ರಾಮಿಕ ಮತ್ತು ಅಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ ಕುರಿತು ಆರೋಗ್ಯ ಶಿಕ್ಷಣ ನೀಡಲಾಯಿತು.

ಈ ಸಂದರ್ಭದಲ್ಲಿ ಪ್ರಾಥಮಿಕ ಆರೋಗ್ಯ ಸುರಕ್ಷಣಾಧಿಕಾರಿ ರೇಣುಕಾ, ಸ್ವಯಂಸೇವಾ ಸಂಸ್ಥೆಯ ಸದಸ್ಯ ಓಂಕಾರ, ಅಂಗನವಾಡಿ ಕಾರ್ಯಕರ್ತೆ ಸರಸ್ವತಿ, ಆಶಾ ಕಾರ್ಯಕರ್ತೆಯರಾದ ಈರಮ್ಮ, ಅರುಣಾ ಸೇರಿದಂತೆ ಗರ್ಭಿಣಿಯರು, ತಾಯಂದಿರು ಹಾಗೂ ಸ್ಥಳೀಯ ಮಹಿಳೆಯರು ಉಪಸ್ಥಿತರಿದ್ದರು.

# ನೇತ್ರದಾನ, ದೇಹದಾನದ ಮೂಲಕ ಸಾವಿನಲ್ಲೂ ಸಾರ್ಥಕತೆ ಮೆರೆದ ರತ್ನಮ್ಮ ಅಜ್ಜಿ



ರಾಯಚೂರು: ಬದುಕಿನ ಪಯಣ ಮುಗಿದರೂ ತಮ್ಮ ನೇತ್ರ ಹಾಗೂ ದೇಹದಾನದ ಮೂಲಕ ಸಮಾಜಕ್ಕೆ ಅಮೂಲ್ಯ ಕೊಡುಗೆ ನೀಡಿದ 80 ವರ್ಷದ ರತ್ನಮ್ಮ ಅಜ್ಜಿ ಸಾವಿನಲ್ಲೂ ಸಾರ್ಥಕತೆ ಮೆರೆದಿದ್ದಾರೆ. ನಗರದ ಲಲಿತ ವೃದ್ಧಾಶ್ರಮದಲ್ಲಿ ಆಶ್ರಯ ಪಡೆದಿದ್ದ ಅವರು, ಮರಣಾನಂತರವೂ ವೈದ್ಯಕೀಯ ಶಿಕ್ಷಣ ಹಾಗೂ ಮಾನವೀಯ ಸೇವೆಗೆ ನೆರವಾಗುವ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ.

ಬೆಂಗಳೂರು ಮೂಲದ ನಾರಾಯಣಸ್ವಾಮಿ ಅವರ ಪತ್ನಿ ರತ್ನಮ್ಮ ಕಳೆದ ಆರು ವರ್ಷಗಳಿಂದ ರಾಯಚೂರಿನ ಲಲಿತ ವೃದ್ಧಾಶ್ರಮದಲ್ಲಿ ಆಶ್ರಯ ಪಡೆದು ಜೀವನ ಸಾಗಿಸುತ್ತಿದ್ದರು. ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಇತ್ತೀಚೆಗೆ ನಿಧನರಾದರು. ಅವರ ನಿಧನದ ವಿಷಯವನ್ನು ಕುಟುಂಬಸ್ಥರಿಗೆ ತಿಳಿಸಿದಾಗ, ಅಂತ್ಯಸಂಸ್ಕಾರದ ಜವಾಬ್ದಾರಿಯನ್ನು ವೃದ್ಧಾಶ್ರಮದವರೇ ನಿರ್ವಹಿಸುವಂತೆ ಕುಟುಂಬದವರು ತಿಳಿಸಿದ್ದರು.

ಈ ಹಿನ್ನೆಲೆಯಲ್ಲಿ ಲಲಿತ ವೃದ್ಧಾಶ್ರಮದ ಮುಖ್ಯಸ್ಥರು ಹಾಗೂ ಸಂಬಂಧಪಟ್ಟವರ ಒಪ್ಪಿಗೆಯೊಂದಿಗೆ ರತ್ನಮ್ಮ ಅವರ ನೇತ್ರದಾನ ಮತ್ತು ದೇಹದಾನ ಪ್ರಕ್ರಿಯೆಯನ್ನು ಕೈಗೊಳ್ಳಲಾಯಿತು. ಅವರ ಪಾರ್ಥಿವ ಶರೀರವನ್ನು ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ರಿಮ್ಸ್)ಯ ದೇಹರಚನಾ ವಿಭಾಗಕ್ಕೆ ಹಸ್ತಾಂತರಿಸಲಾಯಿತು.

ವೈದ್ಯಕೀಯ ವಿದ್ಯಾರ್ಥಿಗಳ ಅಧ್ಯಯನ ಹಾಗೂ ಸಂಶೋಧನೆಗೆ ದೇಹದಾನ ಮಹತ್ವದ ಕೊಡುಗೆಯಾಗಿದ್ದು, ನೇತ್ರದಾನವು ದೃಷ್ಟಿಹೀನರ ಬದುಕಿನಲ್ಲಿ ಹೊಸ ಬೆಳಕು ಮೂಡಿಸಲು ನೆರವಾಗುತ್ತದೆ. ಈ ಎರಡೂ ಮಹತ್ವದ ದಾನಗಳ ಮೂಲಕ ರತ್ನಮ್ಮ ಅಜ್ಜಿ ಮರಣಾನಂತರವೂ ಸಮಾಜಕ್ಕೆ ಉಪಯುಕ್ತವಾಗುವಂತಹ ಸಾರ್ಥಕ ಕಾರ್ಯಕ್ಕೆ ಕಾರಣರಾಗಿದ್ದಾರೆ.

ಆರು ವರ್ಷಗಳ ಕಾಲ ವೃದ್ಧಾಶ್ರಮದಲ್ಲಿ ಆಶ್ರಯ ಪಡೆದಿದ್ದ ಹಿರಿಯ ಜೀವಿಯ ಅಂತಿಮ ಪಯಣವನ್ನು ಮಾನವೀಯ ಸೇವೆಯೊಂದಿಗೆ ಸ್ಮರಣೀಯವಾಗಿಸಿದ ವೃದ್ಧಾಶ್ರಮದ ಆಡಳಿತ ಮಂಡಳಿಯ ಕಾರ್ಯ ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

ಈ ಸಂದರ್ಭದಲ್ಲಿ ಲಲಿತ ವೃದ್ಧಾಶ್ರಮದ ಮುಖ್ಯಸ್ಥ ಮರೆಪ್ಪ ನಾಯಕ, ವಿನೋದ್ ರಾಜ್ ಹಾಗೂ ರಾಯಚೂರು ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ದೇಹರಚನಾ ವಿಭಾಗದ ಸಿಬ್ಬಂದಿ ಉಪಸ್ಥಿತರಿದ್ದು, ದೇಹದಾನ ಪ್ರಕ್ರಿಯೆಗೆ ಸಹಕರಿಸಿದರು.

ಮನುಷ್ಯನ ಬದುಕು ಮುಗಿದ ನಂತರವೂ ಸಮಾಜಕ್ಕೆ ನೆರವಾಗಲು ಸಾಧ್ಯ ಎಂಬುದಕ್ಕೆ ರತ್ನಮ್ಮ ಅಜ್ಜಿಯವರ ನೇತ್ರದಾನ ಮತ್ತು ದೇಹದಾನ ನಿದರ್ಶನವಾಗಿದೆ. ಅವರ ಈ ಸಾರ್ಥಕ ಕೊಡುಗೆ ಸಮಾಜದಲ್ಲಿ ಅಂಗಾಂಗದಾನ ಹಾಗೂ ದೇಹದಾನದ ಕುರಿತು ಜಾಗೃತಿ ಮೂಡಿಸುವುದರ ಜೊತೆಗೆ ಇತರರಿಗೂ ಪ್ರೇರಣೆಯಾಗುವಂತಿದೆ.

# ಈಶಾನ್ಯ ಶಿಕ್ಷಕರ ಮತಕ್ಷೇತ್ರದ ಚುನಾವಣೆ: ಮಾನ್ವಿಯಲ್ಲಿ ಶಶೀಲ್ ನಮೋಶಿ ಪರ ಮತಯಾಚನೆ



ಮಾನ್ವಿ: ಈಶಾನ್ಯ ಶಿಕ್ಷಕರ ಮತಕ್ಷೇತ್ರದ ವಿಧಾನ ಪರಿಷತ್ ಚುನಾವಣೆಯ ಹಿನ್ನೆಲೆಯಲ್ಲಿ ಬಿಜೆಪಿ ಜೆಡಿಎಸ್ ಮೈತ್ರಿಕೂಟದ (ಎನ್‌ಡಿಎ) ಅಭ್ಯರ್ಥಿ ಶಶೀಲ್ ಜಿ. ನಮೋಶಿ ಅವರ ಪರವಾಗಿ ಮಾಜಿ ಶಾಸಕ ರಾಜಾ ವೆಂಕಟಪ್ಪ ನಾಯಕ ಪಟ್ಟಣದ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿ ಶಿಕ್ಷಕರಲ್ಲಿ ಮತಯಾಚನೆ ನಡೆಸಿದರು.

ಪಟ್ಟಣದ ವಿವಿಧ ಶಾಲಾ-ಕಾಲೇಜುಗಳಿಗೆ ಪಕ್ಷದ ಮುಖಂಡರೊಂದಿಗೆ ತೆರಳಿ ಶಿಕ್ಷಕರನ್ನು ಭೇಟಿಯಾದ ಅವರು, ಎನ್‌ಡಿಎ ಅಭ್ಯರ್ಥಿ ಶಶೀಲ್ ಜಿ. ನಮೋಶಿ ಅವರಿಗೆ ಬೆಂಬಲ ನೀಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಜಾ ವೆಂಕಟಪ್ಪ ನಾಯಕ, ಶಶೀಲ್ ಜಿ. ನಮೋಶಿ ಅವರು ಶಿಕ್ಷಕರ ಹಿತಾಸಕ್ತಿ ಕಾಪಾಡಲು ಹಾಗೂ ಶಿಕ್ಷಣ ಕ್ಷೇತ್ರದ ಸಮಸ್ಯೆಗಳಿಗೆ ಸ್ಪಂದಿಸಲು ನಿರಂತರವಾಗಿ ಶ್ರಮಿಸುತ್ತ ಬಂದಿದ್ದಾರೆ. ಶಿಕ್ಷಕರ ಸೇವಾ ಸೌಲಭ್ಯಗಳು, ಸರ್ಕಾರಿ ಯೋಜನೆಗಳ ಪ್ರಯೋಜನ ಹಾಗೂ ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಕಾಳಜಿ ಹೊಂದಿದ್ದಾರೆ ಎಂದು ಹೇಳಿದರು.

ಶಿಕ್ಷಕರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಪರಿಹಾರ ಕಲ್ಪಿಸುವ ನಿಟ್ಟಿನಲ್ಲಿ ನಮೋಶಿ ಅವರು ಕಾರ್ಯನಿರ್ವಹಿಸಲಿದ್ದಾರೆ ಎಂಬ ವಿಶ್ವಾಸ ವ್ಯಕ್ತಪಡಿಸಿದ ಅವರು, ಶಿಕ್ಷಕರು ಚುನಾವಣೆಯಲ್ಲಿ ಅವರನ್ನು ಬೆಂಬಲಿಸುವಂತೆ ಕೋರಿದರು.

ಚುನಾವಣೆಯ ಹಿನ್ನೆಲೆಯಲ್ಲಿ ಮಾನ್ವಿ ಪಟ್ಟಣದ ವಿವಿಧ ಶಿಕ್ಷಣ ಸಂಸ್ಥೆಗಳಿಗೆ ಭೇಟಿ ನೀಡಿದ ಜೆಡಿಎಸ್ ಮುಖಂಡರು, ಶಿಕ್ಷಕರೊಂದಿಗೆ ಚರ್ಚಿಸಿ ಅವರ ಸಮಸ್ಯೆಗಳು ಹಾಗೂ ಬೇಡಿಕೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಮಾನ್ವಿ ತಾಲೂಕು ಜೆಡಿಎಸ್ ಅಧ್ಯಕ್ಷ ಈರಣ್ಣ ಮರ್ಲಟ್ಟಿ, ಸಿರವಾರ ತಾಲೂಕು ಅಧ್ಯಕ್ಷ ಟಿ. ಮಲ್ಲಿಕಾರ್ಜುನ ಪಾಟೀಲ್ ಬಲ್ಲಟಗಿ, ರಾಜ್ಯ ಯುವ ಜೆಡಿಎಸ್ ಉಪಾಧ್ಯಕ್ಷ ರಾಜಾ ರಾಮಚಂದ್ರ ನಾಯಕ, ಮುಖಂಡರಾದ ವಕೀಲ ಪಿ. ರವಿಕುಮಾರ್, ನಾಗರಾಜ ಭೋಗಾವತಿ, ಎಚ್. ಮೌನೇಶ್ ಗೌಡ, ಸುಭಾನ್ ಬೇಗ್, ಉಸ್ಮಾನ್ ಸಾಬ್, ಬಾಷಾಸಾಬ್, ಮೌಲಾಸಾಬ್, ಶರಣಪ್ಪಗೌಡ ಮದ್ಲಾಪುರ, ವಿಜಯ ನಾಯಕ ಕೊಟ್ನೇಕಲ್, ಮೌನೇಶ್ ನಾಯಕ ಹೀರಾ, ಅಮರೇಶ್ ಗೌಡ ಖರಾಬದಿನ್ನಿ, ದೇವರಾಜ ನಾಯಕ, ಬಸವರಾಜ ಸ್ವಾಮಿ, ಅಮರೇಶ್ ನಾಯಕ, ನಾಗರಾಜ ನಾಯಕ ಪೆರಿಕಲ್, ಮಲ್ಲನಗೌಡ ಸೇರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಗೋಲ್ ಮಾರುಕಟ್ಟೆ ಮಾರೆಮ್ಮ ದೇವಸ್ಥಾನಕ್ಕೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಕೆ. ಶಾಂತಪ್ಪ ಭೇಟಿ



ರಾಯಚೂರು: ನಗರದ ಗೋಲ್ ಮಾರುಕಟ್ಟೆಯ ಶ್ರೀ ಮಾರೆಮ್ಮ ದೇವಿ ದೇವಸ್ಥಾನದಲ್ಲಿ ನವರಾತ್ರಿ ಉತ್ಸವದ ಅಂಗವಾಗಿ ಆಯೋಜಿಸಿದ್ದ ವಿಶೇಷ ಪೂಜಾ ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ. ಶಾಂತಪ್ಪ ಭಾಗವಹಿಸಿ ದೇವಿಯ ದರ್ಶನ ಪಡೆದು ಆಶೀರ್ವಾದ ಪಡೆದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಭಾರತೀಯ ಸಂಸ್ಕೃತಿ, ಸಂಪ್ರದಾಯ ಹಾಗೂ ಧಾರ್ಮಿಕ ಆಚರಣೆಗಳು ನಮ್ಮ ನಾಡಿನ ಶ್ರೀಮಂತ ಪರಂಪರೆಯ ಪ್ರತೀಕವಾಗಿವೆ. ಇಂದಿನ ಯುವಕ, ಯುವತಿಯರು ಆಧುನಿಕ ಜೀವನಶೈಲಿಯೊಂದಿಗೆ ನಮ್ಮ ಸಂಸ್ಕೃತಿ ಮತ್ತು ಪರಂಪರೆಯ ಮಹತ್ವವನ್ನು ಅರಿತುಕೊಳ್ಳಬೇಕು. ಧಾರ್ಮಿಕ ಆಚರಣೆಗಳಲ್ಲಿ ಪಾಲ್ಗೊಳ್ಳುವ ಮೂಲಕ ಭಕ್ತಿ, ಶ್ರದ್ಧೆ ಹಾಗೂ ಉತ್ತಮ ಮೌಲ್ಯಗಳನ್ನು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ನವರಾತ್ರಿ ಉತ್ಸವದಂತಹ ಧಾರ್ಮಿಕ ಕಾರ್ಯಕ್ರಮಗಳು ಜನರಲ್ಲಿ ಪರಸ್ಪರ ಪ್ರೀತಿ, ವಿಶ್ವಾಸ ಮತ್ತು ಸೌಹಾರ್ದತೆಯನ್ನು ಹೆಚ್ಚಿಸುವುದರ ಜೊತೆಗೆ ಸಮಾಜದಲ್ಲಿ ಒಗ್ಗಟ್ಟಿನ ಭಾವನೆ ಮೂಡಿಸುತ್ತವೆ ಎಂದು ಅಭಿಪ್ರಾಯಪಟ್ಟರು.

ವಾರ್ಡ್ ಸಂಖ್ಯೆ 4ರ ಸದಸ್ಯ ರಮೇಶ ಬಿ. ಮಾತನಾಡಿ, ಗೋಲ್ ಮಾರುಕಟ್ಟೆಯ ಮಾರೆಮ್ಮ ದೇವಸ್ಥಾನಕ್ಕೆ ವರ್ಷದಿಂದ ವರ್ಷಕ್ಕೆ ಆಗಮಿಸುವ ಭಕ್ತರ ಸಂಖ್ಯೆ ಹೆಚ್ಚಾಗುತ್ತಿದೆ. ಪ್ರಸ್ತುತ ದೇವಸ್ಥಾನದ ಆವರಣವು ಭಕ್ತರಿಗೆ ಸಾಕಾಗದ ಪರಿಸ್ಥಿತಿ ನಿರ್ಮಾಣವಾಗಿದ್ದು, ವಿಶೇಷ ಪೂಜೆ ಹಾಗೂ ಉತ್ಸವಗಳ ಸಂದರ್ಭದಲ್ಲಿ ಸ್ಥಳಾವಕಾಶದ ಕೊರತೆ ಎದುರಾಗುತ್ತಿದೆ. ಈ ಹಿನ್ನೆಲೆಯಲ್ಲಿ ಸರ್ಕಾರವು ದೇವಸ್ಥಾನದ ಅಭಿವೃದ್ಧಿಗೆ ಅಗತ್ಯವಾದ ಹೆಚ್ಚುವರಿ ಜಾಗವನ್ನು ಮಂಜೂರು ಮಾಡಬೇಕು ಎಂದು ಮನವಿ ಮಾಡಿದರು.

ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ಅನುಕೂಲವಾಗುವಂತೆ ಅಗತ್ಯ ಮೂಲಸೌಕರ್ಯಗಳನ್ನು ಕಲ್ಪಿಸುವುದು ಮತ್ತು ದೇವಸ್ಥಾನದ ಆವರಣವನ್ನು ವಿಸ್ತರಿಸುವುದು ಮುಖ್ಯವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ಮಹ್ಮದ್ ಶಾಲಂ ಸೇರಿದಂತೆ ಪಕ್ಷದ ವಿವಿಧ ಮುಖಂಡರು, ದೇವಸ್ಥಾನದ ಭಕ್ತರು ಹಾಗೂ ಸ್ಥಳೀಯರು ಉಪಸ್ಥಿತರಿದ್ದರು.

# ಕ್ರೀಡೆ ಮತ್ತು ಶಿಕ್ಷಣಕ್ಕೆ ಆದ್ಯತೆ ನೀಡಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಿ: ವೇಣುಗೋಪಾಲಗೌಡ




ಜಾಲಹಳ್ಳಿ: ಯುವಜನರ ವ್ಯಕ್ತಿತ್ವ ವಿಕಸನದಲ್ಲಿ ಕ್ರೀಡೆ ಮತ್ತು ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತವೆ. ಕ್ರೀಡಾ ಚಟುವಟಿಕೆಗಳು ಯುವಕರಲ್ಲಿ ಶಿಸ್ತು, ಸೌಹಾರ್ದತೆ ಹಾಗೂ ಒಗ್ಗಟ್ಟಿನ ಮನೋಭಾವ ಬೆಳೆಸುತ್ತವೆ. ಕ್ರೀಡೆಯೊಂದಿಗೆ ಶಿಕ್ಷಣಕ್ಕೂ ಸಮಾನ ಆದ್ಯತೆ ನೀಡಿ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುವ ಮೂಲಕ ಯುವಕರು ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ವಕೀಲ ವೇಣುಗೋಪಾಲಗೌಡ ಸಲಹೆ ನೀಡಿದರು.

ಪಟ್ಟಣದಲ್ಲಿ ಗುರುವಾರ ಆಯೋಜಿಸಿದ್ದ ಹೊರಟ್ಟಿ ಕ್ರಿಕೆಟ್ ಪ್ರೀಮಿಯರ್ ಲೀಗ್ ಪಂದ್ಯಾವಳಿಗೆ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಹನುಮಂತಿ ಶಿವಬಸಪ್ಪ ರಾಂಪಳ್ಳಿ ಚಾಲನೆ ನೀಡಿದ ಸಂದರ್ಭದಲ್ಲಿ ಅವರು ಮಾತನಾಡಿದರು.

ಇಂದಿನ ಯುವಕರು ಕೇವಲ ಮನರಂಜನೆಗಾಗಿ ಕ್ರೀಡೆಯಲ್ಲಿ ತೊಡಗಿಸಿಕೊಳ್ಳದೆ, ತಮ್ಮ ದೈಹಿಕ ಮತ್ತು ಮಾನಸಿಕ ಸಾಮರ್ಥ್ಯವನ್ನು ವೃದ್ಧಿಸಿಕೊಳ್ಳುವ ಉದ್ದೇಶದಿಂದ ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ಕ್ರೀಡೆಯಿಂದ ಆತ್ಮವಿಶ್ವಾಸ, ಶಿಸ್ತು, ನಾಯಕತ್ವದ ಗುಣ ಹಾಗೂ ಪರಸ್ಪರ ಸಹಕಾರದ ಮನೋಭಾವ ಬೆಳೆಯುತ್ತದೆ. ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಗುಣವನ್ನು ಪ್ರತಿಯೊಬ್ಬ ಕ್ರೀಡಾಪಟು ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಯುವಕರು ದುಶ್ಚಟಗಳಿಂದ ದೂರವಿದ್ದು, ತಮ್ಮ ಅಮೂಲ್ಯ ಸಮಯವನ್ನು ಶಿಕ್ಷಣ, ಕ್ರೀಡೆ ಹಾಗೂ ಸಮಾಜಮುಖಿ ಚಟುವಟಿಕೆಗಳಿಗೆ ಮೀಸಲಿಡಬೇಕು. ಗ್ರಾಮೀಣ ಭಾಗದ ಯುವಕರಲ್ಲಿಯೂ ಅಪಾರ ಪ್ರತಿಭೆಯಿದ್ದು, ಸೂಕ್ತ ಅವಕಾಶ ಮತ್ತು ಪ್ರೋತ್ಸಾಹ ದೊರೆತರೆ ಉನ್ನತ ಮಟ್ಟದಲ್ಲಿ ಸಾಧನೆ ಮಾಡಲು ಸಾಧ್ಯವಿದೆ ಎಂದು ಅಭಿಪ್ರಾಯಪಟ್ಟರು.

ಪ್ರಸ್ತುತ ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣ ಮತ್ತು ಉದ್ಯೋಗದ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳುವುದು ಅಗತ್ಯವಾಗಿದೆ. ಕ್ರೀಡೆಯಲ್ಲಿ ಆಸಕ್ತಿ ಹೊಂದಿರುವ ಯುವಕರು ಓದನ್ನು ನಿರ್ಲಕ್ಷಿಸದೆ, ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸಬೇಕು. ಗ್ರಾಮೀಣ ಯುವಕರ ಪ್ರತಿಭೆ ಅನಾವರಣಗೊಳಿಸುವ ಇಂತಹ ಕ್ರೀಡಾಕೂಟಗಳಿಗೆ ಸದಾ ಬೆಂಬಲ ನೀಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಹಿರಿಯ ಕ್ರೀಡಾಪಟು ಶಿವರಾಜ ಬಿದರಾಣಿ ಗುರುತೋಟದ್, ಗ್ರಾಮ ಪಂಚಾಯಿತಿ ಸದಸ್ಯರಾದ ಬಸವರಾಜ ಗೋಪಾಳಪುರ, ಮುದಿಯಪ್ಪ ಪೊಲೀಸ್ ಪಾಟೀಲ್ ಹಾಗೂ ಮುಖಂಡ ರಂಗನಾಥ ಮುರಾಳ ಮಾತನಾಡಿ, ಗ್ರಾಮೀಣ ಪ್ರದೇಶಗಳಲ್ಲಿ ಕ್ರೀಡಾಕೂಟಗಳನ್ನು ಆಯೋಜಿಸುವುದರಿಂದ ಯುವ ಪ್ರತಿಭೆಗಳಿಗೆ ಉತ್ತಮ ವೇದಿಕೆ ದೊರೆಯುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಜೆಡಿಎಸ್ ಮುಖಂಡರಾದ ಶಿವನಗೌಡ ವಂದ್ಲಿ, ಮಂಜುನಾಥ ಪಾಟೀಲ್, ಶ್ರೀಧರ ಪಾಟೀಲ್, ಶರಣು ಹಂಪರಗುಂದಿ, ಶಿವಲಿಂಗಪ್ಪ ಗೆಜ್ಜೆಬಾವಿ, ಗುರು ನಾಯಕ, ಬಸವರಾಜ ಲಿಂಗದಹಳ್ಳಿ, ಹನುಮಂತ ಮಡಿವಾಳ, ಯಂಕೋಬ ಪೂಜಾರಿ, ಭೀಮಣ್ಣ ಗುಂಡಗುರ್ತಿ, ದುರುಗಪ್ಪ ಹೊರಟ್ಟಿ, ಶಿವಮಾನ್ಯಪ್ಪ ಸಾಹುಕಾರ, ಸಿದ್ದು ಡೆಂಗಿ, ರವಿ ತ್ಯಾಪ್ಲಿ, ಜೆ.ಎಸ್. ಹನ್ಮಂತ, ರಮೇಶ ಆರ್.ಡಿ., ಸುರೇಶ, ತಿಮ್ಮಣ್ಣ ಪೂಜಾರಿ, ರಮೇಶ ದಚ್ಚು, ಹಮ್ಮಣ್ಣ, ರಂಗನಾಥ ವಂದ್ಲಿ, ಹುಲಿರಾಜ, ತಿಮ್ಮಣ್ಣ ವಠಾರ ಸೇರಿದಂತೆ ಕ್ರೀಡಾಪಟುಗಳು ಹಾಗೂ ಕ್ರೀಡಾಭಿಮಾನಿಗಳು ಉಪಸ್ಥಿತರಿದ್ದರು.

# ವಾರಾಬಂದಿ ಪದ್ಧತಿ ರದ್ದುಗೊಳಿಸಿ ರೈತರಿಗೆ ನಿರಂತರ ನೀರು ಹರಿಸಲು ಸಂಸದ ಜಿ. ಕುಮಾರ ನಾಯಕ ಆಗ್ರಹ



ಬೆಂಗಳೂರು: ಕೃಷ್ಣಾ ಮೇಲ್ದಂಡೆ ಯೋಜನೆಯ ಕಾಲುವೆಗಳಲ್ಲಿ ಜಾರಿಯಲ್ಲಿರುವ ವಾರಾಬಂದಿ ಪದ್ಧತಿಯನ್ನು ಕೈಬಿಟ್ಟು, ರೈತರ ಕೃಷಿ ಚಟುವಟಿಕೆಗಳಿಗೆ ಅನುಕೂಲವಾಗುವಂತೆ ನಿರಂತರವಾಗಿ ನೀರು ಹರಿಸಲು ಕ್ರಮ ಕೈಗೊಳ್ಳಬೇಕು ಎಂದು ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ. ಕುಮಾರ ನಾಯಕ ಒತ್ತಾಯಿಸಿದರು.

ನಗರದ ವಿಧಾನಸೌಧದಲ್ಲಿ ಗುರುವಾರ ಕೃಷ್ಣಾ ಮೇಲ್ದಂಡೆ ಯೋಜನೆಯ 202627ನೇ ಸಾಲಿನ ಮುಂಗಾರು ಹಾಗೂ ಹಿಂಗಾರು ಹಂಗಾಮಿನ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ವಿಜಯಾನಂದ ಕಾಶಪ್ಪನವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಯಚೂರು ಹಾಗೂ ಯಾದಗಿರಿ ಜಿಲ್ಲೆಗಳ ರೈತರು ನೀರಾವರಿ ನೀರಿನ ಕೊರತೆಯಿಂದ ಹಲವು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಕಾಲುವೆಗಳಲ್ಲಿ ವಾರಾಬಂದಿ ಪದ್ಧತಿಯಡಿ ನೀರು ಹರಿಸುತ್ತಿರುವುದರಿಂದ ಕೃಷಿ ಚಟುವಟಿಕೆಗಳಿಗೆ ಅಗತ್ಯವಿರುವ ಸಂದರ್ಭದಲ್ಲಿ ಸಮರ್ಪಕ ನೀರು ದೊರೆಯುತ್ತಿಲ್ಲ. ಇದರಿಂದ ಬೆಳೆಗಳ ಬೆಳವಣಿಗೆಗೆ ತೊಂದರೆಯಾಗುವುದರ ಜೊತೆಗೆ ರೈತರು ಆರ್ಥಿಕ ಸಂಕಷ್ಟಕ್ಕೆ ಸಿಲುಕುವ ಪರಿಸ್ಥಿತಿ ನಿರ್ಮಾಣವಾಗುತ್ತಿದೆ ಎಂದು ಸಭೆಯ ಗಮನ ಸೆಳೆದರು.

ರೈತರು ಬಿತ್ತನೆ ಮಾಡಿರುವ ಬೆಳೆಗಳಿಗೆ ಸಕಾಲದಲ್ಲಿ ನೀರು ಒದಗಿಸುವುದು ಅತ್ಯಂತ ಅಗತ್ಯವಾಗಿದೆ. ನೀರಾವರಿ ನೀರಿನ ನಿರ್ವಹಣೆಯಲ್ಲಿ ರೈತರ ಹಿತಾಸಕ್ತಿಗೆ ಮೊದಲ ಆದ್ಯತೆ ನೀಡಬೇಕು. ವಿಶೇಷವಾಗಿ ಕಾಲುವೆಗಳ ಕೊನೆಯ ಭಾಗದ ರೈತರಿಗೂ ಸಮರ್ಪಕವಾಗಿ ನೀರು ತಲುಪುವಂತೆ ಅಧಿಕಾರಿಗಳು ಕ್ರಮವಹಿಸಬೇಕು ಎಂದು ಆಗ್ರಹಿಸಿದರು.

ಪ್ರಸ್ತುತ ಅನುಸರಿಸುತ್ತಿರುವ ವಾರಾಬಂದಿ ಪದ್ಧತಿಯಿಂದ ರೈತರಿಗೆ ಉಂಟಾಗುತ್ತಿರುವ ತೊಂದರೆಗಳನ್ನು ಪರಿಗಣಿಸಿ, ನಿರಂತರ ನೀರು ಪೂರೈಕೆಗೆ ಅನುಕೂಲವಾಗುವ ಪರ್ಯಾಯ ವ್ಯವಸ್ಥೆಯನ್ನು ರೂಪಿಸಬೇಕು. ಲಭ್ಯವಿರುವ ನೀರನ್ನು ಸಮರ್ಪಕವಾಗಿ ನಿರ್ವಹಿಸುವ ಮೂಲಕ ಕೃಷಿ ಚಟುವಟಿಕೆಗಳಿಗೆ ಯಾವುದೇ ಅಡಚಣೆಯಾಗದಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನೀರಿನ ಕೊರತೆಯಿಂದ ಬೆಳೆಗಳು ಹಾನಿಗೊಳಗಾದರೆ ರೈತರು ಮತ್ತಷ್ಟು ಸಂಕಷ್ಟಕ್ಕೆ ಒಳಗಾಗಬೇಕಾಗುತ್ತದೆ. ಆದ್ದರಿಂದ ನೀರಾವರಿ ಇಲಾಖೆಯ ಅಧಿಕಾರಿಗಳು ರೈತರ ಸಮಸ್ಯೆಗಳಿಗೆ ತಕ್ಷಣ ಸ್ಪಂದಿಸಿ, ಅಗತ್ಯವಿರುವ ಪ್ರದೇಶಗಳಿಗೆ ಸಕಾಲದಲ್ಲಿ ನೀರು ತಲುಪಿಸಲು ಆದ್ಯತೆ ನೀಡಬೇಕು ಎಂದು ಒತ್ತಾಯಿಸಿದರು.

ಸಭೆಯಲ್ಲಿ ವಾರಾಬಂದಿ ಪದ್ಧತಿಯನ್ನು ಕೈಬಿಟ್ಟು ನಿರಂತರ ನೀರು ಹರಿಸುವ ಕುರಿತು ಸಮಿತಿ ಅಧ್ಯಕ್ಷರು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಗಮನ ಸೆಳೆದ ಸಂಸದರು, ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ಸೂಕ್ತ ನಿರ್ಧಾರ ಕೈಗೊಳ್ಳುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಚಿವರಾದ ಡಾ. ಎಂ.ಬಿ. ಪಾಟೀಲ, ಡಾ. ಶರಣಪ್ರಕಾಶ ಪಾಟೀಲ, ಡಾ. ಅಜಯ್ ಸಿಂಗ್, ಮಾಜಿ ಸಚಿವ ಶರಣಬಸಪ್ಪ ದರ್ಶನಾಪುರ ಸೇರಿದಂತೆ ವಿವಿಧ ಕ್ಷೇತ್ರಗಳ ಶಾಸಕರು ಹಾಗೂ ಸಂಬಂಧಪಟ್ಟ ಇಲಾಖೆಗಳ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಶ್ರೀದೇವಿ ಪುರಾಣ ನಮ್ಮೊಳಗಿನ ದುರ್ಗುಣಗಳನ್ನು ಜಯಿಸುವ ಮಾರ್ಗ ತೋರಿಸುತ್ತದೆ: ಕೊಟ್ಟೂರು ಬಸವಲಿಂಗ ಶ್ರೀ



ಮಾನ್ವಿ: ಮನುಷ್ಯನ ದೇಹದಲ್ಲಿರುವ ಕಾಮ, ಕ್ರೋಧ, ಮದ, ಮಾತ್ಸರ್ಯ, ಮೋಹದಂತಹ ದುರ್ಗುಣಗಳನ್ನು ನಿಯಂತ್ರಿಸಿಕೊಂಡು ಸನ್ಮಾರ್ಗದಲ್ಲಿ ನಡೆಯುವುದೇ ಶ್ರೀದೇವಿ ಪುರಾಣದ ನಿಜವಾದ ಸಂದೇಶವಾಗಿದೆ. ಶ್ರೀದೇವಿಯ ಪುರಾಣವೆಂದರೆ ಅದು ನಮ್ಮ ದೇಹದ ಪುರಾಣವಾಗಿದ್ದು, ಅಂತರಂಗದ ದುರ್ಗುಣಗಳನ್ನು ಜಯಿಸಿದಾಗ ಮಾತ್ರ ದೇವಿಯ ಅನುಗ್ರಹಕ್ಕೆ ಪಾತ್ರರಾಗಲು ಸಾಧ್ಯ ಎಂದು ಹೊಸಪೇಟೆಯ ಕೊಟ್ಟೂರು ಸಂಸ್ಥಾನಮಠದ ಶ್ರೀ ಜಗದ್ಗುರು ಕೊಟ್ಟೂರು ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.

ತಾಲೂಕಿನ ಕರೆಗುಡ್ಡ ಗ್ರಾಮದ ಶ್ರೀ ಮಹಾಂತೇಶ್ವರ ಮಠದಲ್ಲಿ ದಸರಾ ಮಹೋತ್ಸವದ ಅಂಗವಾಗಿ ಆಯೋಜಿಸಿರುವ ಶ್ರೀದೇವಿ ಪುರಾಣ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಶ್ರೀದೇವಿಯ ಸಾಕ್ಷಾತ್ಕಾರ ಹಾಗೂ ಅನುಗ್ರಹ ಪಡೆದ ಶ್ರೀ ಚಿದಾನಂದ ಅವಧೂತರು ರಚಿಸಿದ ಶ್ರೀದೇವಿ ಪುರಾಣದಲ್ಲಿ ಮಾನವನ ಅಂತರಂಗದ ಶುದ್ಧೀಕರಣಕ್ಕೆ ಹೆಚ್ಚಿನ ಮಹತ್ವ ನೀಡಲಾಗಿದೆ. ಮನುಷ್ಯನೊಳಗಿನ ಅರಿಷಡ್ವರ್ಗಗಳೇ ಶುಂಭ, ನಿಶುಂಭರೆಂಬ ದೈತ್ಯರ ಪ್ರತೀಕವಾಗಿವೆ. ಇವುಗಳನ್ನು ನಿಯಂತ್ರಿಸಿ ಸಾತ್ವಿಕ ಬದುಕು ನಡೆಸುವವರು ದೇವಿಯ ಕೃಪೆಗೆ ಪಾತ್ರರಾಗುತ್ತಾರೆ ಎಂದು ತಿಳಿಸಿದರು.

ಜಗತ್ತನ್ನು ಮುನ್ನಡೆಸುವ ಮೂಲಶಕ್ತಿ ಜಗನ್ಮಾತೆಯಾಗಿದ್ದು, ಶ್ರೀದೇವಿ ಪುರಾಣದ ಮೂಲಕ ಪ್ರವಚನಕಾರರು ದೇವಿಯ ಮಹಿಮೆ ಹಾಗೂ ಆಧ್ಯಾತ್ಮಿಕ ಜೀವನದ ಮಹತ್ವವನ್ನು ಜನರಿಗೆ ತಿಳಿಸಿಕೊಡುತ್ತಿದ್ದಾರೆ. ಕರೆಗುಡ್ಡದ ಶ್ರೀ ಮಹಾಂತೇಶ್ವರ ಮಠವು ಪವಿತ್ರ ಜಾಗೃತ ಕ್ಷೇತ್ರವಾಗಿದ್ದು, ಇಲ್ಲಿ ಶ್ರದ್ಧಾಭಕ್ತಿಯಿಂದ ದೇವಿಯನ್ನು ಆರಾಧಿಸಿ ಪುರಾಣ ಶ್ರವಣ ಮಾಡುವುದರಿಂದ ಭಕ್ತರು ಆಧ್ಯಾತ್ಮಿಕ ನೆಮ್ಮದಿ ಹಾಗೂ ದೇವಿಯ ಅನುಗ್ರಹ ಪಡೆಯಬಹುದು ಎಂದು ಹೇಳಿದರು.

ಸೃಷ್ಟಿಯ ನಿರ್ವಹಣೆಯಲ್ಲಿ ಶಕ್ತಿ, ಜ್ಞಾನ ಮತ್ತು ಸಂಪತ್ತಿಗೆ ಮಹತ್ವದ ಸ್ಥಾನವಿದೆ. ಈ ಮೂರನ್ನೂ ಸಾತ್ವಿಕ ಉದ್ದೇಶಗಳಿಗೆ ಬಳಸುವವರು ಸಂತ ಸ್ವಭಾವದವರಾಗುತ್ತಾರೆ. ಜ್ಞಾನವನ್ನು ಲೋಕಕಲ್ಯಾಣಕ್ಕಾಗಿ ಬಳಸುವವರು ದೇವತಾ ಸ್ವರೂಪಿಗಳಾದರೆ, ಅದೇ ಜ್ಞಾನವನ್ನು ದುಷ್ಟ ಕಾರ್ಯಗಳಿಗೆ ಬಳಸುವವರು ಅಸುರ ಪ್ರವೃತ್ತಿಯವರಾಗುತ್ತಾರೆ. ಹೀಗಾಗಿ ಶಕ್ತಿ, ಜ್ಞಾನ ಮತ್ತು ಸಂಪತ್ತನ್ನು ಗಳಿಸುವುದಕ್ಕಿಂತ ಅವುಗಳನ್ನು ಸದುದ್ದೇಶಗಳಿಗೆ ಬಳಸಿಕೊಳ್ಳುವುದು ಅತ್ಯಂತ ಮುಖ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ವಿಜಯದಶಮಿ ಹಬ್ಬವು ಕೇವಲ ಆಚರಣೆಗೆ ಸೀಮಿತವಾಗದೆ ಮನುಷ್ಯನ ಅಂತರಂಗದಲ್ಲಿರುವ ದುಷ್ಟಶಕ್ತಿಗಳ ವಿರುದ್ಧ ಸಾತ್ವಿಕ ಗುಣಗಳ ವಿಜಯವನ್ನು ಸಾರುತ್ತದೆ. ನವರಾತ್ರಿಯ ಒಂಬತ್ತು ದಿನಗಳಲ್ಲಿ ಶಕ್ತಿಸ್ವರೂಪಿಣಿಯಾದ ಜಗನ್ಮಾತೆಯನ್ನು ವಿವಿಧ ರೂಪಗಳಲ್ಲಿ ಆರಾಧಿಸುವ ಮೂಲಕ ಭಕ್ತರು ತಮ್ಮ ಜೀವನದಲ್ಲಿ ಸನ್ಮಾರ್ಗ, ಶಾಂತಿ ಹಾಗೂ ಸದ್ಗುಣಗಳನ್ನು ಅಳವಡಿಸಿಕೊಳ್ಳಬೇಕು. ದೇವಿಯ ಅನುಗ್ರಹ ದೊರೆತಾಗ ಜೀವನದ ಸಾರ್ಥಕತೆಯನ್ನು ಕಂಡುಕೊಳ್ಳಲು ಸಾಧ್ಯ ಎಂದು ಶ್ರೀಗಳು ತಿಳಿಸಿದರು.

ಕಾರ್ಯಕ್ರಮದಲ್ಲಿ ಶ್ರೀ ಮಹಾಂತೇಶ್ವರ ಮಠದ ಶ್ರೀ ಮಹಾಂತಲಿಂಗ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು. ನಂದವಾಡಗಿಯ ಶ್ರೀ ಮಹಾಂತೇಶ ಶಾಸ್ತ್ರಿಗಳು ಶ್ರೀದೇವಿ ಪುರಾಣ ಪ್ರವಚನ ನಡೆಸಿಕೊಟ್ಟರು. ಅಮರೇಶ ಗವಾಯಿಗಳು ಸಾಲಿಮಠ ಸಂಗೀತ ಸೇವೆ ಸಲ್ಲಿಸಿದರೆ, ಬಸವರಾಜಯ್ಯ ಹಿರೇಮಠ ತಬಲಾ ಸಾಥ್ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಮುಖಂಡರು, ಮಠದ ಭಕ್ತರು, ಮಹಿಳೆಯರು ಸೇರಿದಂತೆ ಸಾವಿರಾರು ಭಕ್ತಾದಿಗಳು ಭಾಗವಹಿಸಿ ಶ್ರೀದೇವಿ ಪುರಾಣವನ್ನು ಆಲಿಸಿದರು.

# ಮದರಕಲ್ ಅಂಬಾ ಮಠದ ವಿರುದ್ಧದ ಆರೋಪಗಳು ರಾಜಕೀಯ ಪ್ರೇರಿತ: ಅಮರೇಶ ಪಾಟೀಲ್



ದೇವದುರ್ಗ: ತಾಲೂಕಿನ ಮದರಕಲ್ ಗ್ರಾಮದ ಅವಧೂತ ರಾಜಯೋಗಿ ಸಂತ ನಾಮದೇವಗೌಡ ಶರಣರ ಅಂಬಾ ಮಠದ ವಿರುದ್ಧ ಕೆಲವರು ರಾಜಕೀಯ ದುರುದ್ದೇಶದಿಂದ ಆಧಾರರಹಿತ ಆರೋಪಗಳನ್ನು ಮಾಡುತ್ತಿದ್ದಾರೆ. ಹಲವು ವರ್ಷಗಳಿಂದ ಧಾರ್ಮಿಕ ಹಾಗೂ ಸಾಮಾಜಿಕ ಸೇವೆಯಲ್ಲಿ ತೊಡಗಿರುವ ಮಠದ ಹೆಸರಿಗೆ ಕಳಂಕ ತರುವ ಪ್ರಯತ್ನ ನಡೆಯುತ್ತಿದ್ದು, ಇದರಿಂದ ಸಾವಿರಾರು ಭಕ್ತರ ಧಾರ್ಮಿಕ ಭಾವನೆಗಳಿಗೆ ಧಕ್ಕೆಯಾಗುತ್ತಿದೆ ಎಂದು ಪಲಕನಮರಡಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಅಮರೇಶ ಪಾಟೀಲ್ ಹಾಗೂ ದೇವನಗೌಡ ಆರೋಪಿಸಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಗುರುವಾರ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮದರಕಲ್ ಗ್ರಾಮದ ಅಂಬಾ ಮಠವು ಯಾವುದೇ ಒಂದು ಜಾತಿ ಅಥವಾ ಧರ್ಮಕ್ಕೆ ಸೀಮಿತವಾಗದೆ ಸರ್ವಧರ್ಮದ ಜನರನ್ನು ಒಗ್ಗೂಡಿಸಿಕೊಂಡು ಧಾರ್ಮಿಕ ಮತ್ತು ಸಮಾಜಮುಖಿ ಕಾರ್ಯಗಳನ್ನು ನಡೆಸಿಕೊಂಡು ಬರುತ್ತಿದೆ. ಮಠದ ಬೆಳವಣಿಗೆಗೆ ಆರಂಭದಲ್ಲಿ ಸಹಕಾರ ಮತ್ತು ಪ್ರೋತ್ಸಾಹ ನೀಡಿದವರೇ ಇದೀಗ ಅದರ ವಿರುದ್ಧ ಆರೋಪಗಳನ್ನು ಮಾಡುತ್ತಿರುವುದು ವಿಷಾದನೀಯ ಎಂದರು.

ಮಠದಲ್ಲಿ ಪ್ರತಿವರ್ಷ ಸರ್ವಧರ್ಮ ಸಾಮೂಹಿಕ ವಿವಾಹ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ವಿವಿಧ ಮಠಗಳ ಸ್ವಾಮೀಜಿಗಳನ್ನು ಆಹ್ವಾನಿಸಿ ಧಾರ್ಮಿಕ ಪ್ರವಚನಗಳು, ಆಧ್ಯಾತ್ಮಿಕ ಚಿಂತನೆ ಹಾಗೂ ಸಾಮಾಜಿಕ ಜಾಗೃತಿ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದೆ. ಮಠದ ಗುರುಗಳಾದ ನಾಮದೇವಗೌಡ ಶರಣರು ಪರಿಶಿಷ್ಟ ಪಂಗಡದ ನಾಯಕ ಸಮುದಾಯಕ್ಕೆ ಸೇರಿದವರಾಗಿದ್ದು, ಮೂಢನಂಬಿಕೆ, ಮದ್ಯಪಾನ, ಜೂಜಾಟ ಸೇರಿದಂತೆ ಸಮಾಜದಲ್ಲಿರುವ ದುಶ್ಚಟಗಳಿಂದ ದೂರವಿದ್ದು ಉತ್ತಮ ಜೀವನ ನಡೆಸುವಂತೆ ಭಕ್ತರಿಗೆ ಮಾರ್ಗದರ್ಶನ ನೀಡುತ್ತಿದ್ದಾರೆ ಎಂದು ತಿಳಿಸಿದರು.

ಮಠದ ಸ್ಥಾಪನೆಯ ನಂತರ ಗ್ರಾಮದಲ್ಲಿ ಧಾರ್ಮಿಕ ಹಾಗೂ ಸಾಮಾಜಿಕ ಚಟುವಟಿಕೆಗಳು ಹೆಚ್ಚಾಗಿದ್ದು, ಜಿಲ್ಲೆಯ ವಿವಿಧ ಭಾಗಗಳಿಂದ ಭಕ್ತರು ಆಗಮಿಸುತ್ತಿದ್ದಾರೆ. ಇಂತಹ ಸಂದರ್ಭದಲ್ಲಿ ಗುರುಗಳ ವಿರುದ್ಧ ಅವರದೇ ಸಮುದಾಯದ ಕೆಲವರು ಆರೋಪಗಳನ್ನು ಮಾಡುತ್ತಿರುವುದು ಸರಿಯಲ್ಲ. ಮಠವನ್ನು ತೆರವುಗೊಳಿಸಬೇಕೆಂಬ ಬೇಡಿಕೆಯ ಹಿಂದೆ ರಾಜಕೀಯ ಉದ್ದೇಶವಿದೆ ಎಂದು ಆರೋಪಿಸಿದರು.

ಮಠದ ಜಮೀನಿನ ಕುರಿತು ಮಾತನಾಡಿದ ಅವರು, ಗ್ರಾಮ ಪಂಚಾಯಿತಿ ವ್ಯಾಪ್ತಿಯ ನಿವೇಶನಕ್ಕೆ ಸಂಬಂಧಿಸಿದಂತೆ ಈ ಹಿಂದೆ ಸಾಮಾನ್ಯ ಸಭೆಯಲ್ಲಿ ಠರಾವು ಅಂಗೀಕರಿಸಿ ಜಾಗ ನೀಡಲು ನಿರ್ಧರಿಸಲಾಗಿತ್ತು. ಸುಮಾರು ಎರಡು ಎಕರೆ ಪ್ರದೇಶಕ್ಕೆ ಸಂಬಂಧಿಸಿದಂತೆ ನಿವೇಶನ ವ್ಯವಸ್ಥೆ ಮಾಡಲಾಗಿದ್ದು, ಕೆಲವು ಬಡ ಕುಟುಂಬಗಳು ಅಲ್ಲಿ ಮನೆಗಳನ್ನು ನಿರ್ಮಿಸಿಕೊಂಡಿವೆ. ಮಠದ ಜಾಗದ ವಿಚಾರದಲ್ಲಿ ಅನಗತ್ಯ ಗೊಂದಲ ಸೃಷ್ಟಿಸಲಾಗುತ್ತಿದೆ ಎಂದು ಹೇಳಿದರು.

ಅಂಬಾ ಮಠದ ಟ್ರಸ್ಟ್ ಸ್ಥಾಪನೆಯ ಪ್ರಮುಖ ಉದ್ದೇಶ ಬಡವರು, ರೈತ ಕುಟುಂಬಗಳು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಕುಟುಂಬಗಳ ಮಕ್ಕಳ ಶಿಕ್ಷಣಕ್ಕೆ ನೆರವಾಗುವುದಾಗಿದೆ. ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ಅಭಿವೃದ್ಧಿ ಮತ್ತು ಸಮಾಜದಲ್ಲಿ ಶೈಕ್ಷಣಿಕ ಜಾಗೃತಿ ಮೂಡಿಸುವ ಆಶಯದೊಂದಿಗೆ ಮಠ ಕಾರ್ಯನಿರ್ವಹಿಸುತ್ತಿದೆ ಎಂದು ವಿವರಿಸಿದರು.

ಮದರಕಲ್ ಗ್ರಾಮದ ಹನುಮಗೌಡ ಅವರು ಮಠದ ಗುರುಗಳ ಕುರಿತು ಸಮರ್ಪಕ ಮಾಹಿತಿ ಪಡೆಯದೆ ಆರೋಪಗಳನ್ನು ಮಾಡುತ್ತಿದ್ದಾರೆ. ಯಾವುದೇ ವಿಷಯದ ಬಗ್ಗೆ ಆಕ್ಷೇಪಣೆಗಳಿದ್ದರೆ ಸಂಬಂಧಪಟ್ಟ ದಾಖಲೆಗಳ ಆಧಾರದಲ್ಲಿ ಪ್ರಸ್ತಾಪಿಸಬೇಕು. ಅದನ್ನು ಬಿಟ್ಟು ಮಠ ಮತ್ತು ಗುರುಗಳ ಗೌರವಕ್ಕೆ ಧಕ್ಕೆ ತರುವ ರೀತಿಯಲ್ಲಿ ಹೇಳಿಕೆ ನೀಡುವುದು ಸರಿಯಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಮಠದ ವಿರುದ್ಧ ಆಧಾರರಹಿತ ಆರೋಪಗಳನ್ನು ಮುಂದುವರಿಸಿದರೆ ಭಕ್ತರು ಒಗ್ಗಟ್ಟಾಗಿ ಪ್ರತಿಭಟನೆ ನಡೆಸುವುದು ಅನಿವಾರ್ಯವಾಗಲಿದೆ. ಧಾರ್ಮಿಕ ಕೇಂದ್ರಗಳ ಬಗ್ಗೆ ಸಾರ್ವಜನಿಕರಲ್ಲಿ ಇರುವ ನಂಬಿಕೆ ಮತ್ತು ಭಕ್ತಿಭಾವಕ್ಕೆ ಧಕ್ಕೆಯಾಗದಂತೆ ಎಲ್ಲರೂ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಹನುಮಂತ, ಸಾಬಣ್ಣ, ಚನ್ನಬಸವ ನಾಯಕ, ಅಂಬಣ್ಣ ಮದರಕಲ್, ಕರೆಯಪ್ಪ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಪರಿಶಿಷ್ಟ ಜಾತಿಪಂಗಡಗಳ ಮೀಸಲಾತಿ ಹೆಚ್ಚಳ ಜಾರಿಗೆ ಆಗ್ರಹಿಸಿ ತಹಶೀಲ್ದಾರ್‌ಗೆ ಮನವಿ




ದೇವದುರ್ಗ, ಅ.15: ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡಗಳ ಮೀಸಲಾತಿ ಹೆಚ್ಚಳದ ನಿರ್ಧಾರವನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಿ, ಅರ್ಹ ಸಮುದಾಯಗಳಿಗೆ ಅದರ ಸಂಪೂರ್ಣ ಪ್ರಯೋಜನ ದೊರೆಯುವಂತೆ ರಾಜ್ಯ ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ಕೋರ್ ಕಮಿಟಿ ಹಾಗೂ ದಲಿತ ಸಂಘರ್ಷ ಸಮಿತಿ (ಡಿಎಸ್‌ಎಸ್) ಪದಾಧಿಕಾರಿಗಳು ಗುರುವಾರ ತಹಶೀಲ್ದಾರ್ ನಾಗಮ್ಮ ಕಟ್ಟಿಮನಿ ಅವರಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ಮುಖಂಡ ಹನುಮಂತಪ್ಪ ಕಾಕರಗಲ್ ಮಾತನಾಡಿ, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆ ಹಾಗೂ ಸಾಮಾಜಿಕ, ಆರ್ಥಿಕ ಪರಿಸ್ಥಿತಿಯನ್ನು ಪರಿಗಣಿಸಿ ಮೀಸಲಾತಿ ವ್ಯವಸ್ಥೆಯನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸುವುದು ಸರ್ಕಾರದ ಜವಾಬ್ದಾರಿಯಾಗಿದೆ. ಸಾಮಾಜಿಕ ನ್ಯಾಯದ ಉದ್ದೇಶದಿಂದ ಕೈಗೊಂಡ ಮೀಸಲಾತಿ ಹೆಚ್ಚಳದ ನಿರ್ಧಾರ ಕೇವಲ ಆದೇಶಗಳಿಗೆ ಸೀಮಿತವಾಗದೆ ಅರ್ಹ ಸಮುದಾಯಗಳಿಗೆ ನೈಜವಾಗಿ ಪ್ರಯೋಜನವಾಗಬೇಕು ಎಂದು ಆಗ್ರಹಿಸಿದರು.

ಹಿಂದಿನ ಬಸವರಾಜ ಬೊಮ್ಮಾಯಿ ನೇತೃತ್ವದ ಸರ್ಕಾರದ ಅವಧಿಯಲ್ಲಿ ಪರಿಶಿಷ್ಟ ಜಾತಿಯ ಮೀಸಲಾತಿಯನ್ನು ಶೇ.15ರಿಂದ ಶೇ.17ಕ್ಕೆ ಹಾಗೂ ಪರಿಶಿಷ್ಟ ಪಂಗಡದ ಮೀಸಲಾತಿಯನ್ನು ಶೇ.3ರಿಂದ ಶೇ.7ಕ್ಕೆ ಹೆಚ್ಚಿಸಲಾಗಿತ್ತು. ಆದರೆ, ಈ ನಿರ್ಧಾರದ ಅನುಷ್ಠಾನ ಮತ್ತು ಕಾನೂನುಬದ್ಧತೆಗೆ ಸಂಬಂಧಿಸಿದ ಸಮಸ್ಯೆಗಳಿಂದಾಗಿ ಸಮುದಾಯಗಳಲ್ಲಿ ಗೊಂದಲ ಉಂಟಾಗಿದೆ. ಸರ್ಕಾರ ಈ ವಿಚಾರದಲ್ಲಿ ಸ್ಪಷ್ಟ ನಿಲುವು ತಳೆದು ಮೀಸಲಾತಿ ಹೆಚ್ಚಳದ ಪ್ರಯೋಜನಗಳು ಅರ್ಹರಿಗೆ ತಲುಪುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಮೀಸಲಾತಿ ಯಾರೂ ದಯೆಯಿಂದ ನೀಡುವ ಸೌಲಭ್ಯವಲ್ಲ. ಸಾಮಾಜಿಕವಾಗಿ ಶೋಷಣೆ ಹಾಗೂ ಅಸಮಾನತೆಗೆ ಒಳಗಾದ ಸಮುದಾಯಗಳಿಗೆ ಶಿಕ್ಷಣ, ಉದ್ಯೋಗ ಮತ್ತು ಇತರ ಕ್ಷೇತ್ರಗಳಲ್ಲಿ ಸಮಾನ ಅವಕಾಶ ಕಲ್ಪಿಸುವ ಸಂವಿಧಾನಾತ್ಮಕ ವ್ಯವಸ್ಥೆಯಾಗಿದೆ. ಇಂತಹ ಮಹತ್ವದ ವಿಷಯದಲ್ಲಿ ಸರ್ಕಾರ ವಿಳಂಬ ಧೋರಣೆ ಅನುಸರಿಸದೆ ಸಮುದಾಯಗಳ ಹಿತಾಸಕ್ತಿ ಕಾಪಾಡಲು ಮುಂದಾಗಬೇಕು ಎಂದು ಹೇಳಿದರು.

ಸಾಮಾಜಿಕ ನ್ಯಾಯದ ಬಗ್ಗೆ ಕೇವಲ ಭರವಸೆ ನೀಡುವುದರಿಂದ ಯಾವುದೇ ಪ್ರಯೋಜನವಿಲ್ಲ. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನರ ಶೈಕ್ಷಣಿಕ, ಆರ್ಥಿಕ ಹಾಗೂ ಸಾಮಾಜಿಕ ಪ್ರಗತಿಗೆ ಪೂರಕವಾದ ಕ್ರಮಗಳನ್ನು ಕೈಗೊಳ್ಳಬೇಕು. ಮೀಸಲಾತಿ ಹೆಚ್ಚಳದ ವಿಚಾರದಲ್ಲಿ ಎದುರಾಗಿರುವ ಕಾನೂನು ಮತ್ತು ಆಡಳಿತಾತ್ಮಕ ಸಮಸ್ಯೆಗಳನ್ನು ಪರಿಹರಿಸಿ, ಸಮುದಾಯಗಳಿಗೆ ಅನ್ಯಾಯವಾಗದಂತೆ ಸರ್ಕಾರ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ದೇವದುರ್ಗ ತಾಲೂಕು ಸಂಚಾಲಕ ಶಿವಪ್ಪ ಕೋರಿ ಗಣಜಲಿ, ರಂಗಪ್ಪ ಅಲ್ಕೋಡ್, ನಿಂಗಪ್ಪ ಪಲಕನಮರಡಿ, ಹೈದರ ಅಲಿ, ಬೂದೇಪ್ಪ ಮ್ಯಾತ್ರಿ, ಯೇಸು ಅಯ್ಯಳ್, ನಾಗರಾಜ್ ಅರಿಕೆರ, ಬಸವರಾಜ್ ಹುಲಿಗುಡ್ಡ, ಎಂ.ಆರ್. ಬಸವ ಸೇರಿದಂತೆ ದಲಿತ ಸಂಘರ್ಷ ಸಮಿತಿಯ ಮುಖಂಡರು ಹಾಗೂ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಅಕ್ರಮ ಮದ್ಯ ಮಾರಾಟಕ್ಕೆ ಕಡಿವಾಣ ಹಾಕುವಂತೆ ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡ ಮಹಿಳೆಯರು



ಹಟ್ಟಿ ಚಿನ್ನದ ಗಣಿ: ಸಮೀಪದ ಯಲಗಟ್ಟಾ ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟದ ಹಾವಳಿ ಹೆಚ್ಚಾಗಿದ್ದು, ಇದರಿಂದ ಕುಟುಂಬಗಳು ಸಂಕಷ್ಟಕ್ಕೆ ಸಿಲುಕುತ್ತಿವೆ. ಕೂಡಲೇ ಅಕ್ರಮ ಮದ್ಯ ಮಾರಾಟ ಮಾಡುವ ಅಂಗಡಿಗಳ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಗ್ರಾಮದ ಮಹಿಳೆಯರು ಬುಧವಾರ ಅಧಿಕಾರಿಗಳನ್ನು ತೀವ್ರ ತರಾಟೆಗೆ ತೆಗೆದುಕೊಂಡರು.

ಗ್ರಾಮದ ಮಾರುತೇಶ್ವರ ದೇವಸ್ಥಾನದ ಆವರಣದಲ್ಲಿ ಇತ್ತೀಚೆಗೆ ನಡೆದ ದೌರ್ಜನ್ಯ ಪ್ರಕರಣಗಳ ನಿಯಂತ್ರಣ ಕುರಿತು ಹಮ್ಮಿಕೊಂಡಿದ್ದ ಸಭೆಯಲ್ಲಿ ಮಹಿಳೆಯರು ಅಕ್ರಮ ಮದ್ಯ ಮಾರಾಟದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮದಲ್ಲಿ ಅಕ್ರಮ ಮದ್ಯ ಮಾರಾಟ ಎಗ್ಗಿಲ್ಲದೆ ನಡೆಯುತ್ತಿದ್ದು, ಇದರಿಂದ ಅನೇಕ ಕುಟುಂಬಗಳ ನೆಮ್ಮದಿ ಹಾಳಾಗಿದೆ. ದಿನವಿಡೀ ಕೂಲಿ ಕೆಲಸ ಮಾಡಿ ದುಡಿದ ಹಣವನ್ನು ಕೆಲವರು ಮದ್ಯದ ಅಂಗಡಿಗಳಲ್ಲಿ ಖರ್ಚು ಮಾಡುತ್ತಿದ್ದಾರೆ. ಇದರಿಂದ ಕುಟುಂಬ ನಿರ್ವಹಣೆ, ಮಕ್ಕಳ ಶಿಕ್ಷಣ ಹಾಗೂ ದಿನನಿತ್ಯದ ಜೀವನಕ್ಕೆ ತೀವ್ರ ತೊಂದರೆಯಾಗುತ್ತಿದೆ. ಇದೇ ಪರಿಸ್ಥಿತಿ ಮುಂದುವರಿದರೆ ನಮ್ಮ ಕುಟುಂಬಗಳ ಭವಿಷ್ಯವೇನು ಎಂದು ಮಹಿಳೆಯರು ಅಧಿಕಾರಿಗಳ ಮುಂದೆ ಅಳಲು ತೋಡಿಕೊಂಡರು.

ವಿಶೇಷವಾಗಿ ಗ್ರಾಮದ 16ರಿಂದ 17 ವರ್ಷದ ವಿದ್ಯಾರ್ಥಿಗಳು ಹಾಗೂ ಯುವಕರು ಮದ್ಯದ ಚಟಕ್ಕೆ ಬಲಿಯಾಗುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ. ಓದಿ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕಾದ ವಯಸ್ಸಿನಲ್ಲಿ ಯುವಕರು ಮದ್ಯದ ವ್ಯಸನಕ್ಕೆ ಒಳಗಾಗಿ ತಮ್ಮ ಅಮೂಲ್ಯ ಜೀವನವನ್ನು ಹಾಳು ಮಾಡಿಕೊಳ್ಳುತ್ತಿದ್ದಾರೆ. ಇದನ್ನು ತಡೆಯಲು ಅಧಿಕಾರಿಗಳು ಮುಂದಾಗದಿದ್ದರೆ ಮುಂದಿನ ಪೀಳಿಗೆಯ ಭವಿಷ್ಯವೇ ಅಪಾಯಕ್ಕೆ ಸಿಲುಕಲಿದೆ ಎಂದು ತಾಯಂದಿರು ಕಣ್ಣೀರಿಟ್ಟರು.

ಗ್ರಾಮದಲ್ಲಿ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವ ಅಂಗಡಿಗಳ ಬಗ್ಗೆ ಅಧಿಕಾರಿಗಳಿಗೆ ಮಾಹಿತಿ ಇದ್ದರೂ ಪರಿಣಾಮಕಾರಿ ಕ್ರಮ ಕೈಗೊಳ್ಳುತ್ತಿಲ್ಲ ಎಂದು ಮಹಿಳೆಯರು ಅಸಮಾಧಾನ ವ್ಯಕ್ತಪಡಿಸಿದರು. ಅಕ್ರಮ ಮದ್ಯ ಮಾರಾಟ ನಡೆಯುತ್ತಿರುವ ಅಂಗಡಿಗಳನ್ನು ನಾವೇ ತೋರಿಸುತ್ತೇವೆ. ಅಧಿಕಾರಿಗಳು ಕೂಡಲೇ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿ, ಸಂಬಂಧಪಟ್ಟವರ ವಿರುದ್ಧ ಎಫ್‌ಐಆರ್ ದಾಖಲಿಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಗ್ರಾಮದಲ್ಲಿ ಯಾವುದೇ ಕಾರಣಕ್ಕೂ ಮತ್ತೆ ಅಕ್ರಮ ಮದ್ಯ ಮಾರಾಟಕ್ಕೆ ಅವಕಾಶ ನೀಡಬಾರದು. ಮದ್ಯ ಮಾರಾಟದ ಹಾವಳಿಗೆ ಶಾಶ್ವತ ಕಡಿವಾಣ ಹಾಕುವ ಮೂಲಕ ಮಹಿಳೆಯರು, ಮಕ್ಕಳು ಹಾಗೂ ಯುವಕರ ಹಿತಾಸಕ್ತಿಯನ್ನು ಕಾಪಾಡಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದರು.

ಮಹಿಳೆಯರ ಆಕ್ರೋಶ ಹಾಗೂ ಅಹವಾಲುಗಳನ್ನು ಗಂಭೀರವಾಗಿ ಪರಿಗಣಿಸಿದ ತಹಸೀಲ್ದಾರ್ ಸತ್ಯಮ್ಮ ಅವರು, ಸ್ಥಳದಲ್ಲಿದ್ದ ಅಬಕಾರಿ ಇಲಾಖೆ ಅಧಿಕಾರಿ ಲಕ್ಷ್ಮೀದೇವಿ ಹಾಗೂ ಸಿಪಿಐ ಶಿವಾನಂದ ಗಾಣಿಗೇರ ಅವರಿಗೆ ಅಕ್ರಮ ಮದ್ಯ ಮಾರಾಟದ ಕುರಿತು ಪರಿಶೀಲನೆ ನಡೆಸಿ, ಕಾನೂನು ಪ್ರಕಾರ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಅಧಿಕಾರಿ ರವಿಕುಮಾರ್ ಉಪ್ಪಾರ್, ಪಿಡಿಒ ಸುರೇಶ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ನಾಗರತ್ನ, ಅಲ್ಪಸಂಖ್ಯಾತರ ಇಲಾಖೆ ಅಧಿಕಾರಿ ಜಡಕ್ಷರಿ ನಟರಾಜ್, ಗುರುಗುಂಟಾ ನಾಡ ತಹಸೀಲ್ದಾರ್ ರಾಘವೇಂದ್ರ, ಮಹಿಬೂಬ್ ಸಾಬ್, ನಾಗಮ್ಮ, ಗುರುಸ್ವಾಮಿ, ಮಂಜುಳ, ಅಣ್ಣಯ್ಯ, ಕೃಷ್ಣ ನಾಯಕ, ರಾಜು ನಾಯಕ, ಕನಕಪ್ಪ ಗಂಗಾವತಿ, ನರಸಮ್ಮ, ಪವಾಡೆಮ್ಮ ಸೇರಿದಂತೆ ಗ್ರಾಮದ ಮಹಿಳೆಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ನ್ಯಾಯಾಲಯದ ಜಪ್ತಿ ಆದೇಶದ ನಡುವೆಯೂ ಕಾರುಗಳ ಹಸ್ತಾಂತರಕ್ಕೆ ನಿರಾಕರಣೆ: ರೈತರ ಆರೋಪ



ರಾಯಚೂರು: ಕೃಷ್ಣಾ ಮೇಲ್ದಂಡೆ ಯೋಜನೆಯ 9ನೇ ಕಾಲುವೆಗೆ ಭೂಸ್ವಾಧೀನಪಡಿಸಿಕೊಂಡ ಜಮೀನಿನ ಪರಿಹಾರ ಬಾಕಿ ಪ್ರಕರಣಕ್ಕೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಕಚೇರಿಯ ಎರಡು ಇನ್ನೋವಾ ಕಾರುಗಳನ್ನು ಜಪ್ತಿ ಮಾಡಲು ಮಾನ್ವಿ ಹಿರಿಯ ಸಿವಿಲ್ ನ್ಯಾಯಾಲಯ ಆದೇಶಿಸಿದ್ದರೂ, ಅಧಿಕಾರಿಗಳು ಕಾರುಗಳನ್ನು ಹಸ್ತಾಂತರಿಸದೆ ತೆಗೆದುಕೊಂಡು ಹೋಗಿದ್ದಾರೆ ಎಂದು ಸಂತ್ರಸ್ತ ರೈತರು ಆರೋಪಿಸಿದರು.

ನ್ಯಾಯಾಲಯದ ಆದೇಶದಂತೆ ಯಕ್ಲಾಸಪುರದ ಜಿಲ್ಲಾಡಳಿತ ಕಚೇರಿಗೆ ಆಗಮಿಸಿದ್ದ ರೈತರು ಹಾಗೂ ನ್ಯಾಯಾಲಯದ ಸಿಬ್ಬಂದಿ ಬೆಳಗ್ಗೆಯಿಂದ ಸಂಜೆಯವರೆಗೆ ಕಾದರೂ ಕಾರುಗಳನ್ನು ಹಸ್ತಾಂತರಿಸಲಿಲ್ಲ. ಸಮಯಾವಕಾಶ ಕೇಳಿದ ಅಧಿಕಾರಿಗಳು ಕೊನೆಗೆ ಚಾಲಕರ ಮೂಲಕ ಕಾರುಗಳನ್ನು ತೆಗೆದುಕೊಂಡು ಹೋಗಿದ್ದಾರೆ ಎಂದು ಸಂತ್ರಸ್ತ ಎಂ. ಪ್ರೇಮ್ ಕುಮಾರ್ ದೂರಿದರು.

ಪ್ರಕರಣ ಸಂಖ್ಯೆ /27/2024ರಲ್ಲಿ ₹50.66 ಲಕ್ಷ ಹಾಗೂ /14/2025ರಲ್ಲಿ ₹41.09 ಲಕ್ಷ ಬಾಕಿ ಪರಿಹಾರಕ್ಕೆ ಸಂಬಂಧಿಸಿದಂತೆ ಎರಡು ಕಾರುಗಳ ಜಪ್ತಿಗೆ ಆದೇಶಿಸಲಾಗಿತ್ತು. ನಾಲ್ವರು ಸಂತ್ರಸ್ತ ರೈತರಿಗೆ ಒಟ್ಟು ₹4 ಕೋಟಿ ಪರಿಹಾರ ನೀಡಬೇಕಿದೆ ಎಂದು ವಕೀಲೆ ಉಮಾದೇವಿ ಪಾಟೀಲ ತಿಳಿಸಿದರು.

ನ್ಯಾಯಾಲಯದ ಆದೇಶ ಪಾಲಿಸದೆ ರೈತರಿಗೆ ಅನ್ಯಾಯ ಮಾಡಲಾಗಿದೆ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಸಂತ್ರಸ್ತರಾದ ವಿಜಯಕುಮಾರ ಹೀರಾ, ಜಯಪ್ಪ ಹೀರಾ, ಅಯ್ಯಪ್ಪ ಹುಡಾ ಹಾಗೂ ಶಿವಕುಮಾರ ಹುಡಾ ಉಪಸ್ಥಿತರಿದ್ದರು.

# ರಾಜ್ಯಮಟ್ಟದ ದಸರಾ ಕ್ರೀಡಾಕೂಟದಲ್ಲಿ ದೇವದುರ್ಗದ ದೇವರಾಜಗೆ ಮೂರು ಚಿನ್ನದ ಪದಕ

ದೇವದುರ್ಗ: ಮೈಸೂರಿನಲ್ಲಿ ನಡೆದ ರಾಜ್ಯಮಟ್ಟದ ದಸರಾ ಕ್ರೀಡಾಕೂಟದ ಸಿಎಂ ಕಪ್2026ರ ಬಿಲ್ಲುಗಾರಿಕೆ ಸ್ಪರ್ಧೆಯಲ್ಲಿ ತಾಲೂಕಿನ ಚಿಕ್ಕರಾಯಕುಂಪಿ ಗ್ರಾಮದ ಯುವ ಕ್ರೀಡಾಪಟು ದೇವರಾಜ ಮೂರು ಚಿನ್ನದ ಪದಕಗಳನ್ನು ಗೆಲ್ಲುವ ಮೂಲಕ ಅಪೂರ್ವ ಸಾಧನೆ ಮಾಡಿದ್ದಾರೆ.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ದಸರಾ ಕ್ರೀಡಾ ಉಪಸಮಿತಿ ಸಹಯೋಗದಲ್ಲಿ ಅಕ್ಟೋಬರ್ 11ರಿಂದ 13ರವರೆಗೆ ಮೈಸೂರಿನ ಚಾಮುಂಡಿ ವಿಹಾರ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ ರಾಜ್ಯಮಟ್ಟದ ಕ್ರೀಡಾಕೂಟದಲ್ಲಿ ಕಲಬುರಗಿ ವಿಭಾಗವನ್ನು ಪ್ರತಿನಿಧಿಸಿದ್ದ ದೇವರಾಜ, ಬಿಲ್ಲುಗಾರಿಕೆಯ ಇಂಡಿಯನ್ ರೌಂಡ್ ವಿಭಾಗದಲ್ಲಿ ಉತ್ತಮ ಪ್ರದರ್ಶನ ನೀಡಿ ಮೂರು ವಿಭಾಗಗಳಲ್ಲಿಯೂ ಪ್ರಥಮ ಸ್ಥಾನ ಪಡೆದಿದ್ದಾರೆ.

50 ಮೀಟರ್ ಅಂತರದ ಸ್ಕೋರಿಂಗ್ ರೌಂಡ್, 30 ಮೀಟರ್ ಅಂತರದ ಸ್ಕೋರಿಂಗ್ ರೌಂಡ್ ಹಾಗೂ 50 ಮೀಟರ್ ಅಂತರದ ಎಲಿಮಿನೇಷನ್ ರೌಂಡ್‌ನಲ್ಲಿ ಚಿನ್ನದ ಪದಕಗಳನ್ನು



ತಮ್ಮದಾಗಿಸಿಕೊಂಡಿದ್ದಾರೆ. ಈ ಮೂಲಕ ಒಂದೇ ಕ್ರೀಡಾಕೂಟದಲ್ಲಿ ಮೂರು ಚಿನ್ನದ ಪದಕಗಳನ್ನು ಗೆದ್ದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ರಾಜ್ಯಮಟ್ಟದ ದಸರಾ ಕ್ರೀಡಾಕೂಟದ ಬಿಲ್ಲುಗಾರಿಕೆ ವಿಭಾಗದಲ್ಲಿ ರಾಯಚೂರು ಜಿಲ್ಲೆಗೆ ಮೂರು ಚಿನ್ನದ ಪದಕಗಳು ಲಭಿಸಿರುವುದು ಇದೇ ಮೊದಲು ಎಂದು ತಿಳಿಸಲಾಗಿದೆ. ಗ್ರಾಮೀಣ ಪ್ರದೇಶದಿಂದ ಬಂದ ದೇವರಾಜ ಅವರ ಸಾಧನೆಯು ಜಿಲ್ಲೆಯ ಉದಯೋನ್ಮುಖ ಕ್ರೀಡಾಪಟುಗಳಿಗೆ ಸ್ಫೂರ್ತಿಯಾಗಿದೆ.

ಸೀಮಿತ ಸೌಲಭ್ಯಗಳ ನಡುವೆಯೂ ನಿರಂತರ ಅಭ್ಯಾಸ, ಪರಿಶ್ರಮ ಹಾಗೂ ತರಬೇತುದಾರರ ಮಾರ್ಗದರ್ಶನದಿಂದ ರಾಜ್ಯಮಟ್ಟದಲ್ಲಿ ಗಮನಾರ್ಹ ಸಾಧನೆ ಮಾಡಿರುವ ದೇವರಾಜ ಅವರ ಯಶಸ್ಸಿಗೆ ದೇವದುರ್ಗ ತಾಲೂಕಿನ ಕ್ರೀಡಾಭಿಮಾನಿಗಳು ಸಂತಸ ವ್ಯಕ್ತಪಡಿಸಿದ್ದಾರೆ.

ದೇವರಾಜ ಅವರ ಸಾಧನೆಯನ್ನು ಕರ್ನಾಟಕ ಬಿಲ್ಲುಗಾರಿಕೆ ತರಬೇತುದಾರ ಅನಿಲ್ ಕುಮಾರ್ ರಘು, ಸ್ಥಳೀಯ ತರಬೇತುದಾರ ಮೌನೇಶ್ ಕುಮಾರ್ ಅಮಿತ್, ಜಯಂತ್ ಗೌಡ ಅಂಕೋಲಾ ಸೇರಿದಂತೆ ವಿವಿಧ ಕ್ರೀಡಾಪ್ರೇಮಿಗಳು ಅಭಿನಂದಿಸಿದ್ದು, ಮುಂದಿನ ದಿನಗಳಲ್ಲಿ ರಾಷ್ಟ್ರಮಟ್ಟದಲ್ಲಿಯೂ ಉತ್ತಮ ಸಾಧನೆ ಮಾಡಲಿ ಎಂದು ಶುಭ ಹಾರೈಸಿದ್ದಾರೆ.

Printed By and Published By Tunga Bimba Printers & Publishers 4-4-401/94, Gulbraga Builders Layout, Opp Navodaya Hospital, Yeragera Road, Raichur-584103. Editor: Gururaja.K